ಸಂಪುಟ : 10 ಸಂಚಿಕೆ: 110 ಪುಟ : 4+2 ಬೆಲೆ: 3.00 ರವಿವಾರ ಜೂನ್ 01 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 110 Pages : 4+2 Price : 3.00 Sunday June 01 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ತಾಲೂಕು ಮಟ್ಟದ ಗ್ಯಾರಂಟಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷರಾದ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ಗದಗ ತಾಲೂಕು ಮಟ್ಟದ ಗ್ಯಾರಂಟಿ ಸಭೆಯನ್ನು ಜೂನ್ 2 ರಂದು ಬೆಳಿಗ್ಗೆ 11 ಗಂಟೆಗೆ ಗದಗ ಉಪವಿಭಾಗಾಧಿಕಾರಿಗಳ ಕಚೇರಿ ಆವರಣದಲ್ಲಿರುವ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಕಾರ್ಯಾಲಯದಲ್ಲಿ ಏರ್ಪಡಿಸಲಾಗಿದೆ ಎಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ. 3ರಂದು ಸಲೀಂ ಅಹ್ಮದ ಗದಗ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಮುಖ್ಯ ಸಚೇತಕ ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ ಅವರು ಜೂನ್ 3 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುತ್ತಿದ್ದು ವಿವರ ಇಂತಿದೆ:

ಜೂನ್ 3 ರಂದು ಬೆ.10.30 ಗಂಟೆಗೆ ಹುಬ್ಬಳ್ಳಿಯಿಂದ ಹೊರಟು ಗದಗ ತಾಲೂಕಿನ ಲಕ್ಕುಂಡಿ ಗ್ರಾಮಕ್ಕೆ ಬೆ 11.40 ಗಂಟೆಗ ಆಗಮಿಸಿ ಲಕ್ಕುಂಡಿಯಲ್ಲಿ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 12.40 ಗಂಟೆಗೆ ಲಕ್ಕುಂಡಿ ಗ್ರಾಮದಿಂದ ಗದುಗಿಗೆ ಆಗಮಿಸಿ ನಗರದ ಸ್ವಾಮಿ ವಿವೇಕಾನಂದ ಭವನದಲ್ಲಿ ಕರ್ನಾಟಕ ಕುರುಬರ ಸಹಕಾರ ಪತ್ತಿನ ಸಂಘ ನಿಯಮಿತ ಇದರ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಂಜೆ 5 ಗಂಟೆಗೆ ಗದಗಿನಿಂದ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಇಂದು ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ

■ವಿಜಯಸಾಕ್ಷಿ ಸುದ್ದಿ, ಗದಗ

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಭೀಷ್ಮ ಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ದಿನಾಂಕ:01.06.2025 ರಂದು ರವಿವಾರ ಬೆಳಿಗ್ಗೆ: 6.30 ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ಶರಣಪ್ಪ ಯಡಿಯಾಪೂರ ಮತ್ತು ತಂಡ, ಹರ್ಲಾಪೂರ ಇವರಿಂದ, ಜನಪದ ಸಂಗೀತ ಹಾಗೂ ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಶ್ರೀಮತಿ ಅನಸೂಯಾ ಬೂಮಣ್ಣವರ ಮತ್ತು ತಂಡ, ಲಕ್ಕುಂಡಿ ಇವರಿಂದ ಸುಗಮ ಸಂಗೀತ, ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪತ್ರಿಕಾ ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

### ಜನೌಷಧಿ ಕೇಂದ್ರ ಸ್ಥಗಿತಗೊಳಿಸುವ ರಾಜ್ಯ ಸರ್ಕಾರದ ಆದೇಶ ವಿರೋಧಿಸಿ ಜಿಲ್ಲಾ ಬಿಜೆಪಿಯಿಂದ ಪ್ರತಿಭಟನೆ

# ರಾಜ್ಯ ಸರ್ಕಾರ ಬಡವರ ರಕ್ತ ಹೀರುತ್ತಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಮುಕ್ತ ಮಾರುಕಟ್ಟೆ ಬೆಲೆಗಳಿಗಿಂತ ಶೇ. 50ರಿಂದ 90ರಷ್ಟು ಅಗ್ಗದ ದರದಲ್ಲಿ ಔಷಧಿ ಲಭ್ಯವಿರುವ ಪ್ರಧಾನಮಂತ್ರಿ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸುವ ಆದೇಶ ಹೊರಡಿಸಿದ ರಾಜ್ಯ ಕಾಂಗ್ರೆಸ್ ಸರ್ಕಾರ ರಾಜ್ಯದ ಸಾರ್ವಜನಿಕರ ಜೀವದ ಜೊತೆ ಚೆಲ್ಲಾಟವಾಡುತ್ತಿದೆ ಎಂದು ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಆರೋಪಿಸಿದರು.

ಭಾರತೀಯ ಜನತಾ ಪಾರ್ಟಿ ಜಿಲ್ಲಾ ಘಟಕ, ಗದಗ ನಗರ ಹಾಗೂ ಗದಗ ಗ್ರಾಮೀಣ ಮಂಡಲ ವತಿಯಿಂದ ಶನಿವಾರ ಜಿಲ್ಲಾ ಆಸ್ಪತ್ರೆ ಎದುರು ನಡೆದ ಪ್ರತಿಭಟನೆ ಉದ್ದೇಶಿಸಿ ಮಾತನಾಡುತ್ತಿದ್ದರು.

ರೋಗ ಯಾವುದೇ ಇರಲಿ, ಪೂರೈಕೆಯಲ್ಲಿರುವ ಔಷಧಿಯನ್ನೇ ವೈದ್ಯರು ಬರೆದುಕೊಡುವ ಅನಿವಾರ್ಯ ಪರಿಸ್ಥಿತಿಯನ್ನು ಸರ್ಕಾರ ನಿರ್ಮಾಣ ಮಾಡಿದೆ. ಹೀಗಾದರೆ ರೋಗಿಯ ಕಾಯಿಲೆ ವಾಸಿಯಾಗುವದಾದರೂ ಹೇಗೆ ಎಂದು ಆತಂಕ ವ್ಯಕ್ತಪಡಿಸಿದರು.

ಜನೌಷಧಿ ಕೇಂದ್ರಗಳಿಗೆ ಕೇಂದ್ರ ಆರೋಗ್ಯ ಇಲಾಖೆ ಸ್ವಾಮ್ಯದ ಸಂಸ್ಥೆಗಳೇ ಔಷಧಿ ಪೂರೈಸುತ್ತಿದ್ದು ವಿಶ್ವ ಆರೋಗ್ಯ ಸಂಸ್ಥೆಯಿಂದಲೂ ಪ್ರಮಾಣೀಕೃತವಾಗಿವೆ. ಮಧುಮೇಹ, ಹೃದಯ ಸಂಬಂಧಿ ದೀರ್ಘಾವಧಿ



ಕಾಯಿಲೆಗಳ ಔಷಧಿಗಳು ಸರ್ಕಾರಿ ಆಸ್ಪತ್ರೆಗಳಲ್ಲಿ ಸಮರ್ಪಕ ವಿತರಣೆ ಆಗದಿದ್ದಾಗ ರೋಗಿಗಳು ಅಗ್ಗದ ದರದಲ್ಲಿ ಜನೌಷಧಿ ಕೇಂದ್ರಗಳಲ್ಲಿ ಖರೀದಿಸುತ್ತಾರೆ. ಆಸ್ಪತ್ರೆಗಳಲ್ಲಿ ಎಲ್ಲಾ ಔಷಧಿ ಸಿಗುವಂತೆ ಸರ್ಕಾರ ಕ್ರಮ ಕೈಗೊಳ್ಳಲಿ. ಜೊತೆಗೆ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸಬಾರದು ಎಂದು ಶಾಸಕ ಚಂದ್ರು ಲಮಾಣಿ ಆಗ್ರಹಿಸಿದರು.

ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಂ.ಎಸ್. ಕರಿಗೌಡ್ರ ಮಾತನಾಡಿ, ಔಷಧಿ ಲಾಬಿಗೆ ಮಣಿದ ರಾಜ್ಯ ಸರ್ಕಾರ ಹಣ ಮಾಡಿಕೊಳ್ಳುವ ಉದ್ದೇಶದಿಂದ ಇಂತಹ ಹೇಯ ಕೃತ್ಯಕ್ಕೆ ಮುಂದಾಗಿದ್ದು, ಕೂಡಲೇ ಈ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ಬಿಜೆಪಿ ಇನ್ನು ಹೆಚ್ಚಿನ ಹೋರಾಟ ಕೈಗೊಳ್ಳಲಿದೆ ಎಂದು ಎಚ್ಚರಿಸಿದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಮುಖಂಡರಾದ ಶ್ರೀಪತಿ ಉಡುಪಿ, ರವಿ ದಂಡಿನ, ಬಸವಣ್ಣೆಪ್ಪ ಚಿಂಚಲಿ, ಎಂ.ಎಂ. ಹಿರೇಮಠ, ಜಗನ್ನಾಥಸಾ ಭಾಂಡಗೆ, ನಗರಸಭಾ ಸದಸ್ಯರಾದ ಅನಿಲ ಅಬ್ಬಿಗೇರಿ, ರಾಘವೇಂದ್ರ ಯಳವತ್ತಿ ಮುಂತಾದವರು ಮಾತನಾಡಿದರು.

ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ, ವಿನಾಯಕ ಮಾನ್ವಿ, ಅಶೋಕ ಸಂಕಣ್ಣವರ, ವಿದ್ಯಾವತಿ ಗಡಗಿ, ಲಕ್ಷ್ಮೀ ಕಾಕಿ, ವಿಜಯಲಕ್ಷ್ಮೀ ಮಾನ್ವಿ, ಸುಧೀರ ಕಾಟಿಗೇರ, ನಾಗರಾಜ ತಳವಾರ, ಭದ್ರೇಶ ಕುಸಲಾಪೂರ, ವಾಯ್.ಪಿ. ಅಡನೂರ, ಮಂಜುನಾಥ ಮುಳಗುಂದ, ಎಂ.ಎಂ. ಹಿರೇಮಠ, ಭದ್ರೇಶ ಕುಸ್ಲಾಪೂರ, ರಾಘವೇಂದ್ರ ಯಳವತ್ತಿ, ಅನಿಲ ಅಬ್ಬಿಗೇರಿ, ಬಿ.ಎಸ್. ಚಿಂಚಲಿ, ನಿಂಗಪ್ಪ ಹುಗ್ಗಿ, ಪಕ್ಕಿರೇಶ ರಟ್ಟಿಹಳ್ಳಿ, ವಿನೋದ ಹಂಸನೂರ ಮುಂತಾದವರು ಭಾಗವಹಿಸಿದ್ದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಜನಹಿತವನ್ನು ಕಾಪಾಡಬೇಕಾದ ಸರ್ಕಾರವೇ ಜನರ ರಕ್ತ ಹೀರುತ್ತಿರುವದು ನಾಚಿಕೆಗೇಡಿನ ಸಂಗತಿ. ಸರ್ಕಾರಿ ಆಸ್ಪತ್ರೆಗಳಿಗೆ ಬರುವವರು ಹೆಚ್ಚಾಗಿ ಬಡವರು, ಆರ್ಥಿಕ ಅನಕೂಲ ಇಲ್ಲದವರು. ಅಂತವರ ಬವಣೆ ಅರಿತ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ 16 ವರ್ಷಗಳ ಹಿಂದೆಯೇ ಇಂತಹ ಯೋಜನೆಯನ್ನು ಜಾರಿಗೆ ತಂದಿದ್ದು ದೇಶದಾದ್ಯಂತ 15 ಸಾವಿರಕ್ಕಿಂತಲೂ ಹೆಚ್ಚು ಕೇಂದ್ರಗಳು ತೆರೆಯಲ್ಪಟ್ಟಿವೆ. ಕೋಟ್ಯಾಂತರ ಜನರಿಗೆ ಇದರಿಂದ ಪ್ರಯೋಜನವಾಗಿದೆ. ಮೊದಲಿನಂತೆ ಜನೌಷಧಿ ಕೇಂದ್ರ ಪ್ರಾರಂಭಿಸಬೇಕು ಎಂದು ಹೇಳಿದರು.

### ಜಿಲ್ಲಾ ಮಟ್ಟದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ

# ಸರ್ಕಾರಿ ಶಾಲೆಗಳ ಬಗ್ಗೆ ನಿರ್ಲಕ್ಷ್ಯ ಬೇಡ

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣದ ಜೊತೆಜೊತೆಗೆ ವಿದ್ಯಾರ್ಥಿಗಳಿಗೆ ಭವಿಷ್ಯದಲ್ಲಿ ಬದುಕು ಕಟ್ಟಿಕೊಡುವ ಜೀವನದ ಪಾಠವನ್ನು ಕಲಿಸುವ ಸರ್ಕಾರಿ ಶಾಲೆಗಳ ಬಗ್ಗೆ ನಿರ್ಲಕ್ಷ್ಯ ಬೇಡ ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಅಭಿಪ್ರಾಯಪಟ್ಟರು.

ಅವರು ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ಧಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯವರು ಆಯೋಜಿಸಿದ್ದ 2025ನೇ ಸಾಲಿನ ಜಿಲ್ಲಾ ಮಟ್ಟದ ಶಾಲಾ ಪ್ರಾರಂಭೋತ್ಸವ ಹಾಗೂ ದಾಖಲಾತಿ ಆಂದೋಲನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಾಡಿನ ವಿವಿಧ ಕ್ಷೇತ್ರಗಳ ಸಾಧಕರು ಸರ್ಕಾರಿ ಶಾಲೆಗಳಲ್ಲಿಯೇ ಓದಿದ್ದು ಎಂಬುದನ್ನು ಯಾರೂ ಮರೆಯಬಾರದು. ಸರ್ಕಾರಿ ಶಾಲೆಗಳು ಇಂದು ಯಾವುದಕ್ಕೂ ಕಡಿಮೆ ಇಲ್ಲದಂತೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಮುಂದಿವೆ. 50ಕ್ಕೂ ಹೆಚ್ಚು ಅಗತ್ಯ ಮೂಲಭೂತ ಸೌಕರ್ಯಗಳನ್ನು ವಿದ್ಯಾರ್ಥಿಗಳಿಗೆ ಕೊಡ ಮಾಡುವದರೊಂದಿಗೆ ಉಚಿತ ಶಿಕ್ಷಣವನ್ನು ಸರ್ಕಾರ ನೀಡುತ್ತಿದೆ. ಇಂಗ್ಲೀಷ್ ಮಾಧ್ಯಮ ಶಾಲೆಗಳ ವ್ಯಾಮೋಹದಲ್ಲಿ ಪಾಲಕರು ದುಬಾರಿ ವೆಚ್ಚ ಮಾಡಿ




ವಿದ್ಯಾರ್ಥಿಗಳನ್ನು ಅಲ್ಲಿ ಸೇರಿಸುವ ಮೂಲಕ ಸರ್ಕಾರಿ ಶಾಲೆಗಳಲ್ಲಿರುವ ಸೌಲಭ್ಯಗಳನ್ನು ಸದುಪಯೋಗ ಮಾಡಿಕೊಳ್ಳದೇ ವಂಚಿತರಾಗುತ್ತಿದ್ದಾರೆ. ಮೊದಲು ಇಂಗ್ಲೀಷ್ ಮಾಧ್ಯಮ ವ್ಯಾಮೋಹದಿಂದ ಪಾಲಕರು ಹೊರಬರಲಿ ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಶಾಲಾ ದತ್ತು ಉಸ್ತುವಾರಿ ಡಾ. ಬಸವರಾಜ ಧಾರವಾಡ, ಡೈಯಟ್‌ನ ಪ್ರಾಚಾರ್ಯ ಜಿ.ಎಲ್. ಬಾರಾಟಕ್ಕೆ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಆರ್.ವಿ. ಶೆಟ್ಟೆಪ್ಪನವರ, ವಿ.ವಿ. ನಡುವಿನಮನಿ, ಉಪನ್ಯಾಸಕ ರವಿ ಪ್ರಕಾಶ, ಶಿಕ್ಷಕರ ಸಂಘಟನೆಯ ಬಿ.ಎಫ್. ಪೂಜಾರ ಮುಂತಾದವರು ಮಾತನಾಡಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷೆ ನಂದಾ ಖಟವಟೆ, ನಗರಸಭಾ ಸದಸ್ಯೆ ವಿದ್ಯಾವತಿ ಗಡಗಿ, ಶಂಕರ ಹಡಗಲಿ, ವಿ.ಎಂ. ಹಿರೇಮಠ, ಮಹೇಶ ಕುಚಬಾಳ, ವಿಜಯ ಕಿರೇಸೂರ, ಬಿ.ಕೆ. ನಿಂಬನಗೌಡ್ರ, ಎಸ್.ಆರ್. ಬಂಡಿ, ಎಫ್.ಸಿ. ಅಬ್ಬಿಗೇರಿ, ಪ್ರಭಾರಿ ಮುಖ್ಯೋಪಾಧ್ಯಾಯೆ ಜಯಲಕ್ಷ್ಮೀ ಅಣ್ಣಿಗೇರಿ ಮುಂತಾದವರಿದ್ದರು. ಎಂ.ಎಚ್. ಕಂಬಳಿ ಸ್ವಾಗತಿಸಿದರು. ಬಿ.ಎಸ್. ಯರಗುಡಿ ಕಾರ್ಯಕ್ರಮ ನಿರೂಪಿಸಿದರು.

ವಿವಿಧ ಬಣ್ಣದ ಬಲೂನ್‌ಗಳಿಂದ, ಹಸಿರು ತೋರಣಗಳಿಂದ ಶೃಂಗಾರಗೊಂಡ ಶಾಲೆ ಚಿಣ್ಣರ ಸ್ವಾಗತಕ್ಕೆ ಸಜ್ಜಾಗಿತ್ತು. ಮಕ್ಕಳ ಕಲರವ ಶಾಲೆಯ ತುಂಬೆಲ್ಲ ಝೇಂಕರಿಸಿತ್ತು. ಪ್ರಾರಂಭೋತ್ಸವದ ನಂತರ ಎಲ್ಲ ಮಕ್ಕಳಿಗೂ ಸಿಹಿ ಊಟದ ವ್ಯವಸ್ಥೆ ಮಾಡಿದ್ದು ವಿದ್ಯಾರ್ಥಿಗಳ ಉತ್ಸಾಹವನ್ನು ಇಮ್ಮಡಿಗೊಳಿಸಿತ್ತು.

### ಅವಳಿ ನಗರದಲ್ಲಿ ಪೊಲೀಸ್ ಇಲಾಖೆಯಿಂದ ಸ್ಪೆಷಲ್ ಡ್ರೈವ್

## ಕಾಯ್ದೆ ಉಲ್ಲಂಘಿಸಿದ 141 ಆಟೋ ಚಾಲಕರಿಗೆ ದಂಡ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪೊಲೀಸ್ ಅಧೀಕ್ಷಕ ಬಿ.ಎಸ್. ನೇಮಗೌಡ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಮ್.ಬಿ. ಸಂಕದ ಮಾರ್ಗದರ್ಶನದಲ್ಲಿ, ಗದಗ ಉಪವಿಭಾಗದ ಡಿಎಸ್‌ಪಿ ಮುರ್ತುಜಾ ಖಾದ್ರಿ ನೇತೃತ್ವದಲ್ಲಿ ಗದಗ–ಬೆಟಗೇರಿ ಅವಳಿ ನಗರದಲ್ಲಿ ಸಂಚರಿಸುವ ಆಟೋ/ಟಂಟಂ ರಿಕ್ಷಾಗಳ ಮೇಲೆ ವಿಶೇಷ ಕಾರ್ಯಾಚರಣೆ ಕೈಗೊಂಡು ಅವಳಿ ನಗರದಲ್ಲಿ ಭಾರತೀಯ ಮೋಟಾರು ವಾಹನ ಕಾಯ್ದೆಗಳನ್ನು ಉಲ್ಲಂಘನೆ ಮಾಡಿ ಸಂಚರಿಸುವ ವಾಹನಗಳನ್ನು ತಪಾಸಣೆ ನಡೆಸಿದರು.

ತಪಾಸಣೆ ಸಂದರ್ಭದಲ್ಲಿ ನೋಂದಣಿ ಮಾಡಿಸದೆ ವಾಹನ ಚಾಲನೆ, ಸರಿಯಾದ ದಾಖಲಾತಿಗಳಿಲ್ಲದೆ ವಾಹನ ಚಾಲನೆ ಮಾಡಿದ, ಸಂಚಾರ ನಿಯಮಗಳನ್ನು ಉಲ್ಲಂಘಿಸಿ ಸಂಚರಿಸಿದ ಒಟ್ಟು 141 ಆಟೋ/ಟಂಟಂ ರಿಕ್ಷಾಗಳನ್ನು ತಡೆ ಹಿಡಿದಿದ್ದು, ಅದರಲ್ಲಿ 36 ಆಟೋ/ಟಂಟಂ ರಿಕ್ಷಾಗಳಿಗೆ ಒಟ್ಟು 15100 ರೂಪಾಯಿಗಳ ಸ್ಥಳದಂಡ ಹಾಕಿ, ತಿಳವಳಿಕೆ ಹೇಳಿದರು.

ನೋಂದಣಿ ಮಾಡಿಸದೆ ದಾಖಲಾತಿಗಳಿಲ್ಲದ ವಾಹನ ಚಾಲನೆ ಮಾಡಿದ ಒಟ್ಟು 34 ಆಟೋಗಳು, ಹಾಗೂ ಗದಗ ಸಂಚಾರ ಪೊಲೀಸ್ ಠಾಣೆಯಿಂದ ನೋಂದಣಿ ಮಾಡಿಸದೆ ವಾಹನ ಚಾಲನೆ ಮಾಡಿದ ಒಟ್ಟು 19 ಆಟೋಗಳು ಹಾಗೂ ಶಹರ ಠಾಣೆರವರು ನೋಂದಣಿ ಮಾಡಿಸದೆ ವಾಹನ ಚಾಲನೆ ಮಾಡಿದ ಒಟ್ಟು 40 ಆಟೋ/ಟಂಟಂ ರಿಕ್ಷಾ, ಬೆಟಗೇರಿ ಠಾಣೆಯಿಂದ ನೋಂದಣಿ ಮಾಡಿಸದೆ ವಾಹನ ಚಾಲನೆ ಮಾಡಿದ ಒಟ್ಟು 28 ಆಟೋಗಳು, ಬೆಟಗೇರಿ ಬಡಾವಣೆ ಠಾಣೆಯಿಂದ ನೋಂದಣಿ ಮಾಡಿಸದೆ ವಾಹನ ಚಾಲನೆ ಮಾಡಿದ ಒಟ್ಟು 17 ಆಟೋಗಳು, ಗ್ರಾಮೀಣ ಠಾಣೆಯಿಂದ ನೋಂದಣಿ ಮಾಡಿಸದೆ ವಾಹನ ಚಾಲನೆ ಮಾಡಿದ ಒಟ್ಟು 3 ಆಟೋಗಳು ಸೇರಿ, ಒಟ್ಟೂ 141 ಆಟೋ/ ಟಂಟಂ ರಿಕ್ಷಾಗಳನ್ನು ಅಧಿಕಾರಿಗಳು ತಡೆಹಿಡಿದು, ಅವರಿಗೆ ಸಭೆ ಕೈಗೊಂಡು ಸಂಚಾರ ನಿಯಮಗಳ ಪಾಲನೆ ಮತ್ತು ಸರಿಯಾದ ವಾಹನದ ದಾಖಲಾತಿ ಇಟ್ಟುಕೊಳ್ಳಲು ಸೂಕ್ತ ತಿಳುವಳಿಕೆ ನೀಡಿದರು.

## ಜೂ.3ರಂದು ಗದಗ ಜಿಲ್ಲೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜೂನ್ 3 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಇಂತಿದೆ,

ಜೂನ್ 3 ರಂದು ಬೆಳಿಗ್ಗೆ 11.05 ಗಂಟೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಿಗ್ಗೆ 11.25 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆವರಣದ ಹೆಲಿಪ್ಯಾಡ್‌ಗೆ ಆಗಮಿಸುವರು.

ಬೆ 11.40 ಗಂಟೆಗೆ ಗದಗ ತಾಲೂಕಿನ ಲಕ್ಕುಂಡಿ ಗ್ರಾಮದಲ್ಲಿ ಶ್ರೀ ಕೋಟೆ ವೀರಭದ್ರೇಶ್ವರ ದೇವಸ್ಥಾನ ಆವರಣದಲ್ಲಿ ಉತ್ಖನನಕ್ಕೆ ಚಾಲನೆ ನೀಡುವರು. ಬಯಲು ವಸ್ತು ಸಂಗ್ರಹಾಲಯ ಆವರಣದ ಪ್ರಾಚ್ಯಾವಶೇಷಗಳ ವೀಕ್ಷಣೆ , ಶ್ರೀ ಕಾಶಿ ವಿಶ್ವನಾಥ ದೇವಸ್ಥಾನಕ್ಕೆ ಭೇಟಿ ನೀಡುವರು. ಮಧ್ಯಾಹ್ನ 12.40 ಗಂಟೆಗೆ ಲಕ್ಕುಂಡಿ ಗ್ರಾಮದಿಂದ ಹೊರಟು ಗದಗ ನಗರಕ್ಕೆ ಆಗಮಿಸುವರು. ನಗರದ ಎಪಿಎಂಸಿ ಆವರಣದಲ್ಲಿನ ಸ್ವಾಮಿ ವಿವೇಕಾನಂದ ಸಭಾ ಭವನದಲ್ಲಿ ದಿ.ಕರ್ನಾಟಕ ಕುರುಬರ ಸಂಘ



ಹಾಗೂ ಕರ್ನಾಟಕ ಕುರುಬರ ಸಹಕಾರ ಪತ್ತಿನ ಸಂಘ ಗದಗ ವತಿಯಿಂದ ಆಯೋಜಿಸಿರುವ ಶತಮಾನೋತ್ಸವ ಸಮಾರಂಭದಲ್ಲಿ ಭಾಗವಹಿಸುವರು. ಸಂಜೆ 4.30 ಗಂಟೆಗೆ ಗದಗ ನಗರದ ಪಂಡಿತ ಭೀಮಸೇನ ಜೋಶಿ ರಂಗಮಂದಿರದಲ್ಲಿ ಗದಗ ಬೆಟಗೇರಿ ವ್ಯಾಪಾರ , ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ಉದ್ಘಾಟನೆ ಹಾಗೂ 34 ಎಕರೆ ಪ್ರದೇಶದ ಪ್ರಾಧಿಕಾರದ ಪರಿಕಲ್ಪನೆ ಅನಾವರಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಂಜೆ 5.30 ಗಂಟೆಗೆ ಜಿಲ್ಲಾಡಳಿತ ಭವನದ ಆವರಣದ ಹೆಲಿಪ್ಯಾಡ್‌ನಿಂದ ಹೆಲಿಕಾಪ್ಟರ್ ಮೂಲಕ ಹುಬ್ಬಳ್ಳಿಗೆ ಪ್ರಯಾಣಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಲೋಕಾ ದಾಳಿ: ಶಿರೋಳ ಮನೆಯಲ್ಲಿ ಅಪಾರ ಆಸ್ತಿ ಪತ್ತೆ!



■ವಿಜಯಸಾಕ್ಷಿ ಸುದ್ದಿ, ಗದಗ

ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಆರೋಪದ ಹಿನ್ನೆಲೆಯಲ್ಲಿ ಗದಗ ನಿರ್ಮಿತಿ ಕೇಂದ್ರ ಯೋಜನಾ ನಿರ್ದೇಶಕ ಗಂಗಾಧರ ಶಿರೋಳ ಮನೆ ಮೇಲೆ ಶನಿವಾರ ಮುಂಜಾನೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಅಪಾರ ಪ್ರಮಾಣದ ಆಸ್ತಿ ಪತ್ತೆ ಹಚ್ಚಿದ್ದಾರೆ.

ಬೆಳ್ಳಂ ಬೆಳಿಗ್ಗೆ ಗಂಗಾಧರ ಶಿರೋಳ ಅವರ ಮನೆ, ಕಚೇರಿ ಹಾಗೂ ಅಳಿಯ ವಿಜಯ ಯಳಮೇಲಿ, ಭಾವ ನಾಗರಾಜ್ ಅಕ್ಕಿ ಮನೆಗಳ ಸಹಿತ ಸುಮಾರು 7 ಕಡೆ ದಾಳಿ ನಡೆಸಿದ ಲೋಕಾ ಅಧಿಕಾರಿಗಳು, ಅಪಾರ ಪ್ರಮಾಣದ ಆಸ್ತಿ ಕಂಡು ಬಂದಿದ್ದು, ಅಧಿಕಾರಿಯ ಅಕ್ರಮ ಆಸ್ತಿ ಕಂಡು ಅಧಿಕಾರಿಗಳೇ ಬೆಚ್ಚಿ ಬಿದ್ದಿದ್ದಾರೆ. ದಾಳಿ ವೇಳೆ ಅಧಿಕಾರಿಯ ಮನೆಯಲ್ಲಿ ಭಾರೀ ಪ್ರಮಾಣದ ಹಣ, ಆಸ್ತಿ ಪತ್ರ ಪತ್ತೆಯಾಗಿದೆ. ಅಲ್ಲದೇ ದಾಳಿಯಲ್ಲಿ ಚಿನ್ನ, ಬೆಳ್ಳಿ, ಹಣ ಕಂಡುಬಂದಿದೆ. ಯೋಜನಾ ನಿರ್ದೇಶಕ ಗಂಗಾಧರ್ ಶಿರೋಳ್ ಗೆ ಸೇರಿದ 3 ಕೋಟಿ 49 ಲಕ್ಷದ ಆಸ್ತಿ ಪತ್ತೆಯಾಗಿದ್ದು, ದಾಳಿ ವೇಳೆ ನಾಲ್ಕು ಸೈಟ್ ಪೇಪರ್ಸ್, ಐದು ಬೇನಾಮಿ ಮನೆ ಸೇರಿದಂತೆ ಎರಡು ಮನೆಗಳ ದಾಖಲೆ ಪತ್ರ ವಶಕ್ಕೆ ಪಡೆಯಲಾಗಿದೆ.

ಅಂದಾಜು ಎರಡು ಕೋಟಿ ಐವತ್ತು ಲಕ್ಷ ರೂಪಾಯಿ ಬೆಲೆ ಬಾಳುವ ಆಸ್ತಿ ಪತ್ರ ಸಿಕ್ಕಿದ್ದು, ಬ್ಯಾಂಕ್ ನಲ್ಲಿ 21 ಲಕ್ಷ 50 ಸಾವಿರ ರೂಪಾಯಿ ಠೇವಣಿ ಇಟ್ಟ ಬಗ್ಗೆ ಮಾಹಿತಿ ಲಭ್ಯವಾಗಿದೆ. ದಾಳಿ ವೇಳೆ 23 ಲಕ್ಷ ರೂಪಾಯಿ ಮೌಲ್ಯದ 307 ಗ್ರಾಂ ಚಿನ್ನ, 3 ಲಕ್ಷ 70 ಸಾವಿರ ರೂಪಾಯಿ ಮೌಲ್ಯದ 3 ಕೆಜಿ ಬೆಳ್ಳಿ ವಸ್ತುಗಳು ಪತ್ತೆಯಾಗಿದೆ. ಅಲ್ಲದೇ ಒಂದು ಕಾರು, ಎರಡು ಬೈಕ್ ಇರುವ ಬಗ್ಗೆ ಲೋಕಾಯುಕ್ತ ಪೊಲೀಸರು ಮಾಹಿತಿ ನೀಡಿದ್ದಾರೆ. ಲೋಕಾಯುಕ್ತ ಎಸ್ಪಿ ಹಣಮಂತರಾಯ, ಡಿವೈಎಸ್ಪಿ ವಿಜಯ ಬಿರಾದಾರ ಹಾಗೂ ಸಿಬ್ಬಂದಿ ದಾಳಿಯಲ್ಲಿದ್ದರು.

## ಜನೌಷಧಿ ಕೇಂದ್ರ ರದ್ದತಿ ವಿರೋಧಿಸಿ ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಜಿಲ್ಲಾ ಹಾಗೂ ತಾಲೂಕು ಕೇಂದ್ರಗಳಲ್ಲಿ ಸರಕಾರಿ ಆಸ್ಪತ್ರೆಗಳಲ್ಲಿನ ಪ್ರಧಾನ ಮಂತ್ರಿ ಜನಔಷಧಿ ಕೇಂದ್ರಗಳನ್ನು ರಾಜ್ಯ ಸರ್ಕಾರ ರದ್ದು ಮಾಡಿರುವದನ್ನು ವಿರೋಧಿಸಿ ಲಕ್ಕುಂಡಿ ಬಿ.ಜೆ.ಪಿ ಮಂಡಳದ ಕಾರ್ಯಕರ್ತರು ಶನಿವಾರ ಪ್ರತಿಭಟನೆ ನಡೆಸಿದರು.

ಇಲ್ಲಿಯ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಕೈಗೆ ಕಪ್ಪು ಪಟ್ಟಿ ಕಟ್ಟಿಕೊಂಡು ಪ್ರತಿಭಟನೆ ನಡೆಸಿದ ಕಾರ್ಯಕರ್ತರು, ಬಡವರು, ದೀನ ದಲಿತರಿಗೆ ಸಹಾಯವಾಗಿದ್ದ ಜನಔಷಧ ಕೇಂದ್ರಗಳನ್ನು ಬಂದ್ ಮಾಡಿದ ರಾಜ್ಯ ಸರಕಾರದ ಜನ ವಿರೋಧಿ ನಡವಳಿಕೆಯ ವಿರುದ್ಧ ಘೋಷಣೆ ಕೂಗಿದರು.

ಈ ಸಂದರ್ಭದಲ್ಲಿ ಬಿ.ಜೆ.ಪಿ ಯುವ ಮುಖಂಡ ದತ್ತಾತ್ರೇಯ ಜೋಶಿ ಮಾತನಾಡಿ, ನರೇಂದ್ರ ಮೋದಿಯವರ ಕೇಂದ್ರ ಸರಕಾರ ಬಡವರ ಅನುಕೂಲಕ್ಕಾಗಿ ಜನಔಷಧಿ ಕೇಂದ್ರಗಳನ್ನು ಜಿಲ್ಲಾ ಹಾಗೂ ತಾಲೂಕು ಆಸ್ಪತ್ರೆಗಳಲ್ಲಿ ತೆರೆದು ಉತ್ತಮ ಯೋಜನೆಯನ್ನು ನೀಡಿತ್ತು. ಇದನ್ನು ಅರಿತ ಕಾಂಗ್ರೆಸ್ ಸರಕಾರ ದುಷ್ಟ ರಾಜಕಾರಣದಿಂದ ಕೇಂದ್ರದ ಜನಪ್ರಿಯತೆ ಸಹಿಸಲಾರದೇ ಜನಔಷಧಿ ಕೇಂದ್ರಗಳನ್ನು ರದ್ದು ಮಾಡಿ ಕ್ಷುಲಕ ರಾಜಕಾರಣ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಲಕ್ಕುಂಡಿ ಬಿ.ಜೆ.ಪಿ ಮಂಡಲದ ಅಧ್ಯಕ್ಷ ಮಹೇಶ ಮುಸ್ಕಿನಭಾವಿ ಮಾತನಾಡಿ, ರಾಜ್ಯ ಸರ್ಕಾರ 5 ಗ್ಯಾರಂಟಿ ಯೋಜನೆಗಳನ್ನು ನೀಡುತ್ತಾ ಬಡ ಜನರ ಮೇಲೆ ದುಪ್ಪಟ್ಟು ತೆರಿಗೆಯನ್ನು ಹೇರಿ ಜನ ವಿರೋಧಿ ನೀತಿಯನ್ನು ಅನುಸರಿಸುತ್ತಿದ್ದಾರೆ. ಹಲವಾರು ಭಾಗ್ಯಗಳನ್ನು ಘೋಷಣೆ ಮಾಡಿದೆ. ಆದರೆ ಇದು ವೈಫಲ್ಯಗಳ ಭಾಗ್ಯದ ಸರಕಾರವಾಗಿದೆ ಎಂದು ಆರೋಪಿಸಿದರು.

ಬಿ.ಜೆ.ಪಿ ಲಕ್ಕುಂಡಿ ಮಂಡಲದ ಎಸ್.ಸಿ ಮೋರ್ಚಾ ಅಧ್ಯಕ್ಷ ಬಸವರಾಜ ಮುಳ್ಳಾಳ, ಯುವ ಧುರೀಣ ಪ್ರಕಾಶ ಅರಹುಣಶಿ ಮಾತನಾಡಿದರು.

ಗ್ರಾ.ಪಂ ಸದಸ್ಯರಾದ ರೇವಣಸಿದ್ದಪ್ಪ ಮುಳಗುಂದ, ವಿರೂಪಾಕ್ಷಪ್ಪ ಬೆಟಗೇರಿ, ಅಶೋಕ ಬೂದಿಹಾಳ, ಮರಿಯಪ್ಪ ವಡ್ಡರ, ಅಪ್ಪಣ್ಣ ಕಮತರ, ಬಸವರಾಜ ಕವಲೂರು, ಪ್ರವೀಣ ಕಲಾಲ, ಚನ್ನಪ್ಪ ಹುಬ್ಬಳ್ಳಿ, ವೀರಯ್ಯ ನಡುವಿನಮಠ, ಕಳಕೇಶ ಟೆಂಗಿನಕಾಯಿ, ಶೇಖಪ್ಪ ಮುಸ್ಕಿನಭಾವಿ, ವೀರಭದ್ರಪ್ಪ ಕುಂಬಾರ, ಈರಪ್ಪ ಕುಂಬಾರ, ಪ್ರವೀಣ ಬಂಡಿ, ಚಂದ್ರು ಬಣವಿ ಮುಂತಾದವರು ಹಾಜರಿದ್ದರು.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ವಿದ್ಯಾರ್ಥಿಯ ಜೀವನ ತಪಸ್ಸು ಇದ್ದಂತೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳ ಶ್ರಮ, ಸಂಯಮ ಮತ್ತು ನಿಶ್ಚಲ ದಿಟ್ಟತೆಯೇ ಸಾಧನೆಯ ಯಶಸ್ಸು. ಅದುವೇ ತಂದೆ-ತಾಯಿ, ಶಿಕ್ಷಕರಿಗೆ ಸಂತೋಷ. ವಿದ್ಯಾರ್ಥಿ ಜೀವನ ತಪಸ್ಸು ಇದ್ದಂತೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ ವತಿಯಿಂದ ನಡೆದ 2747ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ವಿದ್ಯಾರ್ಥಿ ಜೀವನ ತಪಸ್ಸು ಇದ್ದಂತೆ. ಪ್ರತಿನಿತ್ಯದ ಬೆಳಗಿನ ಓದು, ರಾತ್ರಿಯ ತಯಾರಿ ನಿಮ್ಮ ಸಾಧನೆಯನ್ನು ಉತ್ತುಂಗಕ್ಕೇರಿಸುತ್ತದೆ. ಈ ಯಶಸ್ಸು ಶಿಕ್ಷಣ ಮಾರ್ಗದ ಒಂದು ಹೆಜ್ಜೆ ಅಷ್ಟೇ. ಮುಂದೆ ಹೋದಂತೆ ಹೆಚ್ಚಿನ ಅವಕಾಶಗಳು ಮತ್ತು ಗುರಿಗಳಿವೆ. ಈ ಸಾಧನೆಗಳು ಉಜ್ವಲವಾದ ಭವಿಷ್ಯಕ್ಕೆ ದಾರಿಯಾಗಿದೆ. ನಿಮ್ಮ ಭವಿಷ್ಯ ಬೆಳಕಿನಿಂದ ತುಂಬಿರಲಿ. ನೀವು ಉಜ್ವಲ ನಕ್ಷತ್ರಗಳಾಗಿರಿ ಎಂದು ಪ್ರತಿಭಾ ಪುರಸ್ಕಾರ ಪಡೆದ ವಿದ್ಯಾರ್ಥಿಗಳಿಗೆ ಶ್ರೀಗಳು ಹಾರೈಸಿದರು.



ಉಪನ್ಯಾಸಕರಾಗಿ ಆಗಮಿಸಿದ್ದ ಗದುಗಿನ ಶಾಲಾ ಶಿಕ್ಷಣ ಇಲಾಖೆಯ ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಎಚ್.ಬಿ. ರಡ್ಡೇರ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯೂ ಓದುವ ಬಗ್ಗೆ ಸಮರ್ಪಣಾ ಭಾವ ಮತ್ತು ಶಿಸ್ತು ರೂಢಿಸಿಕೊಂಡರೆ ಉತ್ತಮ ಅಂಕ ಪಡೆಯಲು ಸಾಧ್ಯ. ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಾಧಿಸಿದ ಉನ್ನತ ಫಲಿತಾಂಶ ಶಿಕ್ಷಣ ಇಲಾಖೆಗೆ ಸಾಧನೆಯ ಮುಕುಟವಾಗಿದೆ. ನಿಮ್ಮ ಮುಂಬರುವ ಶಿಕ್ಷಣದ ಆಯ್ಕೆ ನಿಮ್ಮ ಆಸಕ್ತಿಯ ಆಯ್ಕೆ ಆಗಿರಲಿ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಜಿಲ್ಲೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡುತ್ತಾ, ಪರೀಕ್ಷೆಯಲ್ಲಿ ಪರಿಶ್ರಮ ಪಟ್ಟು ಓದಿ ಉತ್ತಮ ಅಂಕ ಪಡೆದಿದ್ದೀರಿ. ನಿಮ್ಮ ಫಲಿತಾಂಶ ನೈಜ ಫಲಿತಾಂಶ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ವೆಬ್‌ಕಾಸ್ಟಿಂಗ್ ಇದ್ದಾಗಲೂ ಪರಿಶ್ರಮಪಟ್ಟು ಓದಿ ಜಿಲ್ಲೆಯ ಕೀರ್ತಿಯನ್ನು ತಂದಿದ್ದೀರಿ. ಇದೇ ರೀತಿ ನಿಮ್ಮ ಸಾಧನೆ ಸಾಗಲಿ ಎಂದು ಶುಭ ಹಾರೈಸಿದರು.

ಗದುಗಿನ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಿಕ ಹಾಗೂ ಶಿರಹಟ್ಟಿಯ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಎಂ.ಸಿ. ಗಿರಿತಮ್ಮಣ್ಣವರ ಉಪಸ್ಥಿತರಿದ್ದರು. ವಚನ ಸಂಗೀತ ಸೇವೆಯನ್ನು ಗುರುನಾಥ್ ಸುತಾರ, ಅನಿರುದ್ಧ ಧನೇಶ್ ದೇಸಾಯಿ ಮತ್ತು ಶಿವಾನಂದ ಭಾವಿಕಟ್ಟಿ ನಡೆಸಿಕೊಟ್ಟರು.

ತೋಂಟದಾರ್ಯ ಕೈಗಾರಿಕಾ ತರಬೇತಿ ಕೇಂದ್ರ ಮಂಡಲಗಿರಿಯ ಕಿರಿಯ ತರಬೇತಿ ಅಧಿಕಾರಿ ಭೋಜರಾಜ ಸೊಪ್ಪಿಮಠ ರಚಿಸಿದ 'ಎಲ್ಲಾ ನನ್ನವಳದೇ' ಪುಸ್ತಕವನ್ನು ಲೋಕಾರ್ಪಣೆಗೊಳಿಸಲಾಯಿತು. ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಗದಗ ಜಿಲ್ಲೆಗೆ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ 21 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಧಾರ್ಮಿಕ ಗ್ರಂಥ ಪಠಣವನ್ನು ವಿಶ್ವಾಸ ಎಂ.ಮಳಗಾವಿಮಠ ಹಾಗೂ ವಚನ ಚಿಂತನವನ್ನು ಸ್ಫೂರ್ತಿ ಎಂ.ಮಳಗಾವಿಮಠ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಲಿಂಗನಗೌಡ ಶಂಕರಗೌಡ ಬೆಳವಟಿಗಿ ವಹಿಸಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹ ಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ, ಸಹ ಚೇರಮನ್ ಶಿವಾನಂದ ಹೊಂಬಳ ಸೇರಿದಂತೆ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು. ಡಾ. ಉಮೇಶ ಪುರದ ಸ್ವಾಗತಿಸಿದರೆ, ಅಶೋಕ ಹಾದಿ ಕಾರ್ಯಕ್ರಮ ನಿರೂಪಿಸಿದರು.

# ವಿಶ್ವ ತಂಬಾಕು ವಿರೋಧಿ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಬಸ್‌ನಿಲ್ದಾಣದಲ್ಲಿ ವಿಶ್ವ ತಂಬಾಕು ವಿರೋಧಿ ದಿನಾಚರಣೆಯನ್ನು ಆಚರಿಸಲಾಯಿತು. ಸ್ಥಳೀಯ ಈಶ್ವರೀಯ ವಿಶ್ವವಿದ್ಯಾಲಯದವರು ಏರ್ಪಡಿಸಿದ್ದ ಈ ಕಾರ್ಯಕ್ರಮವನ್ನು ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಮತ್ತು ಸ್ಥಾಯಿ ಸಮಿತಿ ಅಧ್ಯಕ್ಷ ಮುತ್ತಪ್ಪ ನೂಲ್ಕಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಕುಮಾರಸ್ವಾಮಿ ಮಾತನಾಡಿ, ತಂಬಾಕು ಕ್ಯಾನ್ಸರ್ ರೋಗಕ್ಕೆ ದಾರಿ ಮಾಡುತ್ತದೆ. ತಂಬಾಕಿನ ಉತ್ಪನ್ನಗಳು ಬಹಳಷ್ಟು ಅಪಾಯಕಾರಿಯಾಗಿದ್ದು, ಜನತೆ ಅವುಗಳಿಂದ ದೂರವಿದ್ದಷ್ಟೂ ಒಳ್ಳೆಯದು.



ಸೇವಿಸುವಾಗ ಮೊದಮೊದಲು ಬಹಳಷ್ಟು ಮಜವೆನ್ನಿಸುತ್ತದೆ. ಆದರೆ ದಿನಗಳೆದಂತೆ ಅದು ನಿಮ್ಮನ್ನೇ ನುಂಗಿ ಹಾಕುವ ಮಟ್ಟಕ್ಕೆ ಬೆಳೆಯುತ್ತದೆ. ಆದ್ದರಿಂದ ತಂಬಾಕಿನಿಂದ ದೂರವಿರಿ ಎಂದರು. ಸಂಚಾಲಕಿ ಬಿ.ಕೆ. ಸವಿತಕ್ಕ ಮಾತನಾಡಿ, ದುಶ್ಚಟಗಳು ಮೊದಲಿಗೆ ಸೇವನೆಗೆ ನಿಮ್ಮನ್ನು ಪ್ರೇರೇಪಿಸುತ್ತವೆ. ಅವುಗಳ ಮೂಲ ಮಂತ್ರ ಏನೆಂದರೆ ಮೊದಲು ನೀನು ನನ್ನನ್ನು ತೆಗದುಕೊ, ನಂತರ ನಿಧಾನವಾಗಿ ನಾನು ನಿನ್ನನ್ನು ತೆಗೆದುಕೊಂಡು ನಿನ್ನನ್ನು ಮಣ್ಣಲ್ಲಿ ಮಣ್ಣಾಗಿಸುತ್ತೇನೆ ಎನ್ನುತ್ತದೆ. ಆದ್ದರಿಂದ ತಂಬಾಕು ಸೇವನೆ ಅಪಾಯಕಾರಿಯಾಗಿದ್ದು, ಅವುಗಳ ಸೇವನೆಯಿಂದ ದೂರವಿರಬೇಕೆಂದು ಹೇಳಿದರು.

ತಂಬಾಕು ಸೇವನೆಯಿಂದಾಗುವ ಹಾನಿಯ ಬಗ್ಗೆ ಅವರು ವಿವಿಧ ಚಾರ್ಟ್‌ಗಳನ್ನು ಪ್ರದರ್ಶಿಸುವ ಮೂಲಕ ವಿವರಣೆ ನೀಡಿದರು. ಈ ಸಂದರ್ಭದಲ್ಲಿ ನಿಲ್ದಾಣದ ಸಾರಿಗೆ ನಿಯಂತ್ರಕ ಬಿ.ಎಸ್. ನಾಯಕರ, ಸಿದ್ದಣ್ಣ ಚವರಿ, ಡಾ. ಎಲ್. ಆರ್. ರಡ್ಡೇರ, ಆರೋಗ್ಯ ಇಲಾಖೆಯ ಸಂಗೀತಾ ಗುಮ್ಮಗೋಳಮಠ, ಎಲ್.ಸಿ. ಹೊಸಮನಿ, ನಾಡಗೌಡ ಮತ್ತಿತರರು ಇದ್ದರು.

### ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಾರ್ಷಿಕ ಸಮಾರೋಪ ಸಮಾರಂಭ

# ಶಿಕ್ಷಣದ ಪ್ರಾಮುಖ್ಯತೆ ಒತ್ತಿ ಹೇಳುವ ದುರ್ಗತಿ ಯಾವ ದೇಶಕ್ಕೂ ಬರಬಾರದು: ಯಾಳಗಿ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಶಿಕ್ಷಣದ ಪ್ರಾಮುಖ್ಯತೆಯನ್ನು ಒತ್ತಿ ಹೇಳುವ ದುರ್ಗತಿ ಯಾವ ದೇಶಕ್ಕೂ ಬರಬಾರದು. ಪ್ರತಿಯೊಬ್ಬರು ಅದನ್ನು ಅರಿತುಕೊಂಡು ಸಮಾಜಕ್ಕೆ ನ್ಯಾಯ ಒದಗಿಸಬೇಕು ಎಂದು ಉಪನ್ಯಾಸಕ, ಸಾಹಿತಿ ರಮೇಶಬಾಬು ಯಾಳಗಿ ಹೇಳಿದರು. ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ನಡೆದ ವಾರ್ಷಿಕ ಸಮಾರೋಪ ಸಮಾರಂಭ ಹಾಗೂ ಪದವಿ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶೈಕ್ಷಣಿಕವಾಗಿ ಪ್ರಗತಿ ಸಾಧಿಸದಿದ್ದರೆ ಸಾಮಾಜಿಕವಾಗಿ ಕೊಡುಗೆ ಶೂನ್ಯ. ಸಮಾಜ ಚನ್ನಾಗಿಲ್ಲ ಎನ್ನುವ ಬದಲು ನಾವು ಸರಿಯಾಗಬೇಕಿದೆ. ಸಂಸ್ಕಾರರಹಿತ ವಿದ್ಯಾರ್ಥಿಗಳಿಂದ ಭಯಾನಕ ವಾತಾವರಣ ಸೃಷ್ಟಿಯಾಗುತ್ತದೆ. ವಿದ್ಯಾರ್ಥಿಗಳು ಸಂಸ್ಕಾರ, ಸಂಸ್ಕೃತಿ ಅಳವಡಿಸಿಕೊಂಡು ಬದುಕನ್ನು ಉಜ್ವಲಗೊಳಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ವಿದ್ಯಾರ್ಥಿ ದೆಸೆಯಲ್ಲಿ ಸಮಯಕ್ಕೆ ಆದ್ಯತೆ ನೀಡಬೇಕು. ಕಳೆದು ಹೋದ ವಸ್ತುವನ್ನು ಯಾವಗಲಾದರೂ ಪಡೆಯಬಹುದು, ಗಳಿಸಬಹುದು. ಆದರೆ ಸಮಯ ಮತ್ತು ಸಮುದ್ರದ ಅಲೆಯನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ. ಓದುವ ಸಮಯದಲ್ಲಿ ಓದುವುದನ್ನು ಬಿಟ್ಟು ಉಳಿದೆಲ್ಲ ಮಾಡಿದರೆ ಮುಂದೆ ಜೀವನ ರೂಪಿಸಿಕೊಳ್ಳಲು ಸಾಧ್ಯವಿಲ್ಲ. ಹೆತ್ತವರಿಗೆ ಮಕ್ಕಳ ಬಗ್ಗೆ ಅಪಾರ ಕನಸುಗಳಿರುತ್ತವೆ, ಭರವಸೆ ಇರುತ್ತದೆ. ಅದನ್ನು ಅರಿತುಕೊಂಡು ಸಮಯದೊಂದಿಗೆ ಹೆಜ್ಜೆ ಹಾಕಬೇಕು ಎಂದು ಮಾರ್ಮಿಕವಾಗಿ ತಿಳಿಸಿದರು.

ಕಾಲೇಜಿನ ಸಾಂಸ್ಕೃತಿಕ ವಿಭಾಗದ ಮುಖ್ಯಸ್ಥರು, ಕನ್ನಡ ವಿಭಾಗದ ಸಹಪ್ರಾಧ್ಯಾಪಕರಾದ ಡಾ.ಭಾಗ್ಯಜ್ಯೋತಿ ಪ್ರಾಸ್ತಾವಿಕ ಮಾತನಾಡಿ, ಅತಿಥಿಗಳಿಗೆ ಕಾಲೇಜಿನ ಪರಿಚಯ ಮತ್ತು ಸಮಾರಂಭದ ಅತಿಥಿ ಪರಿಚಯ ಮಾಡಿಕೊಟ್ಟು, ಪರೀಕ್ಷಾ ಸಿದ್ಧತೆಗಳನ್ನು ವಿವರಿಸಿದರು. ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥ ವೈ.ಬಿ.ಅಂಗಡಿ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಅತಿಥಿ ಉಪನ್ಯಾಸಕ ಶಿವಪುತ್ರಪ್ಪ. ಎಂ., ಪತ್ರಾಂಕಿತ ವ್ಯವಸ್ಥಾಪಕ ಮಹಾಂತೇಶ ವೇದಿಕೆಯಲ್ಲಿದ್ದರು.

ಡಾ.ತುಕಾರಾಂ ನಾಯ್ಕ ಸ್ವಾಗತಿಸಿದರು. ವಿಜಯ ಮಠಪತಿ ಪ್ರಾರ್ಥಿಸಿದರು. ಶಾರದಾ ಹಾಗೂ ಸಂಗಡಿಗರಿಂದ ಸ್ವಾಗತ ನೃತ್ಯ ಗಮನ ಸೆಳೆಯಿತು. ಡಾ.ನಾಗರಾಜ ದೊರೆ ವಂದಿಸಿದರು. ಡಾ.ಮಹಾಂತೇಶ ನೆಲಾಗಣಿ ನಿರೂಪಿಸಿದರು.

**ವಿದಾಯಭಾವದ ನಡುವೆಯೂ ವಿದ್ಯಾರ್ಥಿಗಳ ಆರ್‌ಸಿಬಿ ಸಂಭ್ರಮ:**

ಕಾರ್ಯಕ್ರಮದಲ್ಲಿ ಕಾಲೇಜಿನ ವಿದ್ಯಾರ್ಥಿ ದೇವರಾಜ ನಾಯಕ್ ಈಚೆಗೆ ವಿದ್ಯುತ್ ಅಪಘಾತಕ್ಕೊಳಗಾಗಿ ಸಾವನ್ನಪ್ಪಿದ್ದು ಹಾಗೂ ಹಿರಿಯ ಸಾಹಿತಿ ಡಾ.ಎಚ್.ಎಸ್.ವೆಂಕಟೇಶ ಮೂರ್ತಿ ಅಗಲಿಕೆಗೆ ಮೌನವನ್ನು ಆಚರಿಸಲಾಯಿತು. ವಿದ್ಯಾರ್ಥಿ ದೇವರಾಜನ ದೊಡ್ಡ ಭಾವಚಿತ್ರವನ್ನು ಕಟ್ಟಡದ ಮೇಲಿಂದ ಕೆಳಗೆ ಬಿಟ್ಟು ಕ್ಷೀರಾಭಿಷೇಕ ಮಾಡಿ ಸಂತಾಪ ಸೂಚಿಸಲಾಯಿತು.

ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಪದವಿ ಸಹಪಾಠಿಗಳ ವಿದಾಯದ ನಡುವೆಯೂ ವೇದಿಕೆ ಕಾರ್ಯಕ್ರಮದ ನಂತರ ಮನರಂಜನಾ ಕಾರ್ಯಕ್ರಮಗಳಲ್ಲಿ ಕುಣಿದು ಸಂಭ್ರಮಿಸಿದರು. ಕಾಲೇಜಿನಲ್ಲಿ ಎಲ್ಲರೂ ಫೋಟೋಗಳ, ಸೆಲ್ಫಿಗಳ ಸಾಗರ ಕಂಡು ಬಂತು. ಇವೆಲ್ಲದರ ನಡುವೆ ಐಪಿಎಲ್ನ ಆರ್‌ಸಿಬಿ ತಂಡದ ಪರ ವಿದ್ಯಾರ್ಥಿಗಳ ಘೋಷಣೆ ಮೊಳಗಿತು. ಹಲವು ವಿದ್ಯಾರ್ಥಿಗಳು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಜೆರ್ಸಿ ಧರಿಸಿದ್ದು ವಿಶೇಷವೆನಿಸಿತು.

# ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಸಹಕರಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯನ್ನೇ ಗುರಿಯಾಗಿಸಿಕೊಂಡು ಸರ್ಕಾರದ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸಿ ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಸಹಕರಿಸಬೇಕೆಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಶುಕ್ರವಾರ ಗದುಗಿನ ರಾಜೀವ ಗಾಂಧಿ ನಗರದ ಉರ್ದು ಶಾಲೆ ನಂ. 4ರಲ್ಲಿ ಮಕ್ಕಳಿಗೆ ಸರ್ಕಾರದಿಂದ ಉಚಿತವಾಗಿ ನೀಡಿದ ಪಠ್ಯಪುಸ್ತಕಗಳನ್ನು ವಿತರಿಸಿ ಮಾತನಾಡಿದರು.

ನಮ್ಮ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಆಟ-ಪಾಠದೊಂದಿಗೆ ಬದುಕನ್ನು ಗಟ್ಟಿಗೊಳಿಸಿಕೊಳ್ಳುತ್ತವೆ. ಕ್ಷೀರ ಭಾಗ್ಯ, ಮಧ್ಯಾಹ್ನದ ಬಿಸಿಯೂಟ, ಸಮವಸ್ತ್ರ, ಶೂ ಭಾಗ್ಯ, ಶಿಷ್ಯವೇತನದಂತಹ ಕಾರ್ಯಕ್ರಮಗಳು, ಉಚಿತ ಆರೋಗ್ಯ ತಪಾಸಣೆಯನ್ನೂ ನಡೆಸಲಾಗುತ್ತದೆ. ಪ್ರತಿಭಾನ್ವಿತ ಶಿಕ್ಷಕ ಬಳಗವು ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿದ್ದು, ಸಮುದಾಯವು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವ ಮೂಲಕ ಗುಣಾತ್ಮಕ ಶಿಕ್ಷಣಕ್ಕೆ ಒತ್ತು ನೀಡಬೇಕೆಂದು ವಿನಂತಿಸಿದರು. ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯೆ ಕೆ.ಎ. ದಾವಲಖಾನವರ ವಹಿಸಿ ಮಾತನಾಡಿ, ಮಕ್ಕಳಿಗೆ ದೊರೆಯಬೇಕಾದ ಸರ್ಕಾರಿ ಸೌಲಭ್ಯಗಳನ್ನು ತಲುಪಿಸುವ ಪ್ರಯತ್ನ ನಿರಂತರವಾಗಿ ನಡೆಸಲಾಗುತ್ತಿದೆ ಎಂದರು.

ಶಿಕ್ಷಕ ಐ.ಎ. ಗಾಡಗೋಳಿ ಪ್ರಾಸ್ತಾವಿಕವಾಗಿ ಮಾತನಾಡಿ, ನನ್ನ ಶಾಲೆ ನನ್ನ ಕೊಡುಗೆ ಅನ್ವಯ ದಾನಿಗಳ ಹಾಗೂ ಶಿಕ್ಷಕ ಬಳಗದಿಂದ ಈಗಾಗಲೇ ಶಾಲೆಗೆ ಸಾಕಷ್ಟು ಸಾಮಗ್ರಿಗಳನ್ನು ಪಡೆಯಲಾಗಿದ್ದು, ಸರ್ಕಾರಿ ಶಾಲೆಯ ಮೇಲೆ ಸಮುದಾಯಕ್ಕೆ ಇರುವ ವಿಶ್ವಾಸವನ್ನು ಇದು ತೋರಿಸುತ್ತದೆ ಎಂದರು.

ಎಚ್.ಬಿ. ಮಕಾನದಾರ ಹಾಗೂ ಎನ್.ಎಚ್. ಜಕ್ಕಲಿ ಮಾತನಾಡಿದರು. ಎಸ್.ಎಸ್. ಬಳ್ಳಾರಿ ಸ್ವಾಗತಿಸಿ ನಿರೂಪಿಸಿದರು. ಹಸೀನಾ ಮುಲ್ಲಾ ವಂದಿಸಿದರು.

### ಸೇವಾ ವಯೋ ನಿವೃತ್ತಿ ನಿಮಿತ್ತ ಬೀಳ್ಕೊಡುಗೆ ಸಮಾರಂಭ

# ಬೋಧಕ ಕಾರ್ಯಕ್ಕೆ ನಿವೃತ್ತಿ ಇಲ್ಲ: ಅಂಗಡಿ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಸರಕಾರಿ ಸೇವೆಯಲ್ಲಿ ವಯಸ್ಸಿಗೆ ನಿವೃತ್ತಿ ಇರುವುದು ಸಹಜ. ಜಗತ್ತಿನ ಶ್ರೇಷ್ಠ ಕೆಲಸಗಳಲ್ಲಿ ಬೋಧನಾ ವೃತ್ತಿ ಅತ್ಯಂತ ಶ್ರೇಷ್ಠವಾದದ್ದು. ವಯಸ್ಸಿನಿಂದ ನಿವೃತ್ತರಾದರೂ ಬೋಧನಾ ಕಾರ್ಯದಿಂದ ನಿವೃತ್ತಿ ಇರುವುದಿಲ್ಲ. ವಿದ್ಯಾರ್ಥಿಗಳಿಗೆ ಗುರು ಸದಾ ಮಾರ್ಗದರ್ಶಕ ಎಂದು ಇಲ್ಲಿನ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಭಾರಿ ಪ್ರಾಂಶುಪಾಲ ವೈ.ಬಿ.ಅಂಗಡಿ ಹೇಳಿದರು.

ಕಾಲೇಜಿನ ಸಭಾಂಗಣದಲ್ಲಿ ಶನಿವಾರ ಸೇವಾ ವಯೋ ನಿವೃತ್ತಿ ಹೊಂದಿದ ಇಂಗ್ಲಿಷ್ ವಿಭಾಗದ ಅತಿಥಿ ಉಪನ್ಯಾಸಕ ಶಿವಪುತ್ರಪ್ಪ ಎಂ. ಹಾಗೂ ಗಣಿತಶಾಸ್ತ್ರ ವಿಭಾಗದ ಅತಿಥಿ ಉಪನ್ಯಾಸಕಿ ರಾಧಾರಾಣಿ.ಕೆ. ಅವರ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿವಪುತ್ರಪ್ಪ ಹಾಗೂ ರಾಧಾರಾಣಿಯವರು ವಿದ್ಯಾರ್ಥಿಗಳಿಗೆ ದಾರಿದೀಪವಾಗಿದ್ದರು. ಸದಾ ನದುಮೊಗದಿಂದಲೇ ಪಾಠ ಮಾಡುತ್ತಿದ್ದ ಇವರ ಮುಂದಿನ ಜೀವನ ಸುಖಮಯವಾಗಿರಲಿ ಎಂದು ಹಾರೈಸಿದರು. ಸಮಾರಂಭದಲ್ಲಿ ಉಪನ್ಯಾಸಕರಾದ ಶರಣಬಸಪ್ಪ ಬಿಳಿಯಲಿ, ಡಾ.ನಾಗರಾಜ ದಂಡೋತಿ, ಹಿರಿಯ ಅತಿಥಿ ಉಪನ್ಯಾಸಕ ಡಾ.ವೀರಣ್ಣ ಸಜ್ಜನರ್ ಸೇರಿದಂತೆ ಅನೇಕರು ಮಾತನಾಡಿದರು.

ವಿವಿಧ ಕಾಲೇಜುಗಳ ಅತಿಥಿ ಉಪನ್ಯಾಸಕರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ನಿವೃತ್ತರನ್ನು ಅತಿಥಿ ಉಪನ್ಯಾಸಕರ ಬಳಗದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಇದೇ ವೇಳೆ ಡಾಕ್ಟರೇಟ್ ಪದವಿ ಗಳಿಸಿದ ಡಾ.ಶಿವಬಸಪ್ಪ ಮಸ್ಕಿ, ಡಾ.ಪ್ರಕಾಶ ಜಡಿಯವರ, ಡಾ.ಮಹಾಂತೇಶ ನೆಲಾಗಣಿ ಹಾಗೂ ಡಾ.ವಿಜಯಕುಮಾರ್. ಕೆ. ಅವರನ್ನು ಸತ್ಕರಿಸಲಾಯಿತು.

ಕುಮಾರಿ ಬೃಂದಾ ಎಂ.ಸಿ. ಪ್ರಾರ್ಥಿಸಿದರು. ಶಿವಮೂರ್ತಿ ಗುತ್ತೂರು ಸ್ವಾಗತಿಸಿದರು. ಜ್ಞಾನೇಶ್ವರ ಪತ್ತಾರ ಪ್ರಾಸ್ತಾವಿಕ ಮಾತನಾಡಿದರು. ಬಸವರಾಜ ಕರುಗಲ್ ವಂದಿಸಿದರು.


### ಶ್ರೀ ರಾಘವೇಂದ್ರಸ್ವಾಮಿಗಳ ಮೃತ್ತಿಕಾ ಬೃಂದಾವನ ಪ್ರತಿಷ್ಠಾಪನಾ ಸ್ವಾಗತ ಸಮಾರಂಭ

# ರಾಯರ ಅನುಗ್ರಹದಿಂದ ಸಮೃದ್ಧಿ ನೆಲೆಸಲಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ರಾಘವೇಂದ್ರತೀರ್ಥ ಗುರುಸಾರ್ವಭೌಮರ ಕಳಸಾಪೂರ-ಗದಗ ಭಾಗದಲ್ಲಿನ ಭಕ್ತವರ್ಗದ ಬಹುದಿನಗಳ ಆಶಯದಂತೆ ರಾಯರ ಮೃತ್ತಿಕಾ ಬೃಂದಾವನ ಮಠವನ್ನು ಸ್ಥಾಪನೆ ಮಾಡಿದ್ದು, ಈ ಸುಕ್ಷೇತ್ರ ನಿರ್ಮಾಣವಾದ ನಂತರ ಈ ಭಾಗದಲ್ಲಿ ಶಾಂತಿ-ಸಮೃದ್ಧಿ ನೆಲೆಸಲಿದೆ ಎಂದು ಮಂತ್ರಾಲಯದ ಶ್ರೀಮನ್‌ಮಧ್ವಾಚಾರ್ಯ ಮೂಲಸಂಸ್ಥಾನದ ಪೀಠಾಧಿಪತಿಗಳಾದ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರು ನುಡಿದರು.

ಅವರು ಶುಕ್ರವಾರ ಇಲ್ಲಿನ ಕಳಸಾಪೂರ ರಸ್ತೆಯಲ್ಲಿರುವ ನಂಜನಗೂಡು ರಾಘವೇಂದ್ರಸ್ವಾಮಿಗಳ ಮಠದಲ್ಲಿ ಶ್ರೀ ರಾಘವೇಂದ್ರಸ್ವಾಮಿಗಳ ಮೃತ್ತಿಕಾ ಬೃಂದಾವನ ಪ್ರತಿಷ್ಠಾಪನಾ ಸ್ವಾಗತ ಸಮಾರಂಭದ ದಿವ್ಯ ಅಧ್ಯಕ್ಷತೆ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಜಾತಿ-ವರ್ಗ-ಪಂಥದ ಎಲ್ಲೆಗಳನ್ನು ದಾಟಿ ಸರ್ವರಿಂದ ಪೂಜಿತಗೊಳ್ಳುವ, ಸರ್ವರನ್ನೂ ಸಲಹುವ ರಾಘವೇಂದ್ರ ಮಹಾಸ್ವಾಮಿಗಳ ಪಾದಧೂಳಿಯಿಂದ ಗದಗ ಕ್ಷೇತ್ರ ಪಾವನವಾಗಿದೆ. ರಾಘವೇಂದ್ರ ಸ್ವಾಮಿಗಳ ಪವಾಡಗಳು ಹಾಗೂ ಅವರ ಶ್ರೀರಕ್ಷೆ ಇಲ್ಲಿನ ಜನರ ಅನುಭವಕ್ಕೆ ವೇದ್ಯವಾಗಿದ್ದು, ಈ ಕಾರ್ಯಕ್ರಮವನ್ನು ಭಕ್ತರು ಹಬ್ಬದಂತೆ ಆಚರಿಸುತ್ತಿರುವುದು ಇದಕ್ಕೆ ಸಾಕ್ಷಿಯಾಗಿದೆ ಎಂದರು.



ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರಿಗೆ ತುಲಾಭಾರ ಕಾರ್ಯಕ್ರಮ ಅದ್ದೂರಿಯಾಗಿ ನೆರವೇರಿತು. ಶ್ರೀಮಠದ ಪಂಡಿತರಿಂದ ವೇದಘೋಷ ಜರುಗಿತು. ಶ್ರೀದೇವಿ ಹೆಗಡಿಕಟ್ಟಿ ಹಾಗೂ ಸಂಗಡಿಗರ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಕಾರ್ಯಕ್ರಮಕ್ಕೂ ಮುನ್ನ ಕಳಸಾಪೂರ ಗ್ರಾಮದಿಂದ ಶ್ರೀಮಠಕ್ಕೆ ವಾದ್ಯವೈಭವದೊಂದಿಗೆ, ಕಲಾ ತಂಡಗಳು ಹಾಗೂ ಭಜನಾ ಮಂಡಳಿಗಳ ಉಪಸ್ಥಿತಿಯಲ್ಲಿ ಜರುಗಿದ ಶೋಭಾಯಾತ್ರೆ ಮೂಲಕ ಪೂಜ್ಯರು ಆಗಮಿಸಿದರು. ರಾಜೇಶ್ವರಿ ಕಲಾಕುಟಿರದ ಮಕ್ಕಳಿಂದ ಸಂಗೀತ-ನೃತ್ಯ ಜರುಗಿತು. ಕಟ್ಟಡ ನಿರ್ಮಾಣ ಸಮಿತಿ ಕಾರ್ಯದರ್ಶಿ ಗುರುರಾಜ ಹೆಬಸೂರ ಸ್ವಾಗತಿಸಿದರು. ವಾದಿರಾಜ ಆಚಾರ್ಯ, ಗೋಪಾಲ ಅಗರವಾಲ, ಶರತ್ ಹುಯಿಲಗೋಳ, ಕೋದಂಡರಾಮ ಕುಷ್ಟಗಿ, ರಾಘವೇಂದ್ರ ಕಾಲವಾಡ, ಶರಣಬಸಪ್ಪ ಗುಡಿಮನಿ, ಆನಂದ್ ಪೋತ್ನಿಸ್, ಪ್ರವೀಣ ವಾರಕರ, ಮಧುಸೂದನ ಪುಣೇಕರ, ಪ್ರಕಾಶ ಬೊಮ್ಮನಹಳ್ಳಿ ಸೇರಿದಂತೆ ಕಾರ್ಯಕ್ರಮದ ವಿವಿಧ ಸಮಿತಿಗಳ ಮುಖಂಡರು ಹಾಗೂ ಗುರುರಾಯರ ಭಕ್ತರು ಹಾಜರಿದ್ದರು.

ಶೋಭಾಯಾತ್ರೆಯುದ್ದಕ್ಕೂ ಜನರ ಮನೆಗಳು ತಳಿರುತೋರಣಗಳಿಂದ ಸಿಂಗಾರಗೊಂಡಿದ್ದನ್ನು ಕಂಡಿದ್ದು, ಮೃತ್ತಿಕಾ ಬೃಂದಾವನ ಪ್ರತಿಷ್ಠಾಪನೆ ಗದಗ ಭಕ್ತರಿಗೆ ಅತ್ಯಂತ ಖುಷಿ ನೀಡಿದೆ. ಜನರ ಸಹಾಯ-ಸಹಕಾರ ಹಾಗೂ ಭಕ್ತಿಯ ಕಾರಣವಾಗಿ ಇಂಥ ಕಾರ್ಯಕ್ರಮ ಸಂಘಟನೆಯಾಗಿದ್ದು, ಈ ಭಾಗದಲ್ಲಿ ಮಳೆ-ಬೆಳೆ, ದವಸ-ಧಾನ್ಯ ಸೇರಿದಂತೆ ಸಕಲ ಸಮೃದ್ಧಿ ನೆಲೆಸಲಿ, ಗುರುರಾಯರ ಕೃಪೆಯಿಂದ ಈ ಜನರ ಬದುಕು ಹಸನಾಗಲಿ ಎಂದು ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರು ಆಶೀರ್ವದಿಸಿದರು.

## ಶ್ರೀ ಹಳವೀರ ಬಸವೇಶ್ವರ ಜಾತ್ರೆ ನಾಳೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಬಸವನಕೊಪ್ಪ ಗ್ರಾಮದ ಶ್ರೀ ಹಳವೀರ ಬಸವೇಶ್ವರ ಜಾತ್ರಾ ಮಹೋತ್ಸವ ಹಾಗೂ ನೂತನ ರಥದ ಲೋಕಾರ್ಪಣೆ ನಿಮಿತ್ತ ಜೂ.2ರಂದು ಬೆಳಿಗ್ಗೆ ಶ್ರೀ ಬಸವೇಶ್ವರ ಸ್ವಾಮಿಗೆ ಪ್ರಾತಃಕಾಲ ರುದ್ರಾಭಿಷೇಕ, ಬೆಳಿಗ್ಗೆ 8 ಗಂಟೆಗೆ ಕುಂಭೋತ್ಸವ ಮೆರವಣಿಗೆ, ಸಂಜೆ ಸಂಜೆ 5ಕ್ಕೆ ಶಿರಹಟ್ಟಿಯ ಜಗದ್ಗುರು ಫಕೀರ ಸಿದ್ದರಾಮ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ನೂತನ ರಥದ ಲೋಕಾರ್ಪಣೆ ಮತ್ತು ರಥೋತ್ಸವ, ಬಳಿಕ ಧರ್ಮಸಭೆ ಜರುಗುವುದು.

ಹತ್ತಿಮತ್ತೂರಿನ ಶ್ರೀ ನಿಜಗುಣ ಮಹಾಸ್ವಾಮಿಗಳು, ಹೂವಿನಶಿಗ್ಲಿಯ ಶ್ರೀ ಚನ್ನವೀರ ಮಹಾಸ್ವಾಮಿಗಳು, ಗಂಜಿಗಟ್ಟಿಯ ಶ್ರೀ ವೈಜನಾಥ ಶಿವಲಿಂಗ ಶಿವಾಚಾರ್ಯರು, ಬಸವನಕೊಪ್ಪದ ಮುರಗಯ್ಯ ಹಿರೇಮಠ, ಗಿರಿಮಲ್ಲಯ್ಯ ಹಿರೇಮಠ ಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಗ್ರಾಮದ ಗುರು-ಹಿರಿಯರು, ಗಣ್ಯರು, ಜನಪ್ರತಿನಿಧಿಗಳು ಉಪಸ್ಥಿತರಿರುವರು.

ಜೂ.3ರ ಸಂಜೆ ಕಡುಬಿನೋತ್ಸವ ಜರುಗುವುದು ಎಂದು ದೇವಸ್ಥಾನ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

### ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಎಲ್.ಎಲ್.ಬಿ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ

## ಕಲಿಕೆಗೆ ನಿರಂತರ ಶ್ರಮ ಅಗತ್ಯ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪ್ರಸ್ತುತ ದಿನಗಳಲ್ಲಿ ಕಾನೂನು ಸಮಾಜದ ಕಣ್ಣಾಗಿ ಪರಿವರ್ತನೆಯಾಗುತ್ತಿದೆ. ಯಾವುದೇ ಕ್ಷೇತ್ರವಾಗಲಿ, ಸಮಸ್ಯೆಯಾಗಲಿ ಮೊದಲು ನೆನಪಿಗೆ ಬರುವುದು ವಕೀಲರು ಎಂಬ ಭಾವನೆ ಜನರಲ್ಲಿದೆ. ಪತಿ-ಪತ್ನಿಯ ಮುಂದೆ, ಪತ್ನಿ-ಪತಿ ಮುಂದೆ ಹೇಳದ ವಿಷಯವನ್ನು ನ್ಯಾಯವಾದಿಗಳ ಮುಂದೆ ಪ್ರಸ್ತಾಪಿಸಿ ನ್ಯಾಯವನ್ನು ಪಡೆಯಲು ಮುಂದಾಗುತ್ತಿರುವ ಪರಿಸ್ಥಿತಿ ಇದೆ. ಆದ್ದರಿಂದ ವಕೀಲ ವೃತ್ತಿಗೆ ಹೆಜ್ಜೆ ಹಾಕುತ್ತಿರುವ ಯುವ ವಕೀಲರು ಸಮಾಜದ ಕಣ್ಣಾಗಿ ಕಾರ್ಯ ಮಾಡಬೇಕಿದೆ ಎಂದು ಗದಗ ಮುಖ್ಯ ಹಿರಿಯ ದಿವಾನಿ ಮತ್ತು ಪ್ರಧಾನ ನ್ಯಾಯಿಕ ದಂಡಾಧಿಕಾರಿ ಜಿ.ಆರ್. ಶೆಟ್ಟರ ಹೇಳಿದರು.




ನಗರದ ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಶನಿವಾರ ಜರುಗಿದ ಎಲ್.ಎಲ್.ಬಿ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ, ಸಾಂಸ್ಕೃತಿಕ ಚಟುವಟಿಕೆ ಮತ್ತು ವಿವಿಧ ಸ್ಪರ್ಧೆಗಳಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ನ್ಯಾಯಾಲಯ ಮತ್ತು ನ್ಯಾಯವಾದಿಗಳ ಸಂಬಂಧ ಉತ್ತಮವಾಗಿರಬೇಕಾದರೆ ಯುವ ಸಮುದಾಯದ ವಕೀಲರು ಕಠಿಣ ಪರಿಶ್ರಮ ಮತ್ತು ಹೆಚ್ಚು ಪುಸ್ತಕಗಳನ್ನು ಅಭ್ಯಾಸ ಮಾಡುವ, ಹೊಸ ಹೊಸ ಮಹತ್ವದ ತೀರ್ಪುಗಳನ್ನು ಪುಸ್ತಕಗಳಲ್ಲಿ ಹುಡುಕುವ ಪ್ರಸಂಗ ಇತ್ತು. ಆದರೆ, ಸದ್ಯ ಅತ್ಯಾಧುನಿಕ ತಂತ್ರಜ್ಞಾನದ ಬಳಕೆಯಿಂದ ತುದಿ ಬೆರಳಲ್ಲಿ ಹೊಸ ರೋಲಿಂಗ್ ದೊರೆಯುತ್ತಿವೆ. ಹೀಗಾಗಿ ಅವುಗಳ ಜ್ಞಾನದ ಜೊತೆಗೆ ಅವುಗಳಲ್ಲಿನ ತತ್ವ-ಸಿದ್ಧಾಂತಗಳು ತಮ್ಮ ಪ್ರಕರಣಗಳಿಗೆ ಅನ್ವಯವಾಗುತ್ತವೆಯೇ ಎಂಬುದರ ಬಗ್ಗೆ ಸಂಪೂರ್ಣ ಜ್ಞಾನ ಹೊಂದಬೇಕು. ನ್ಯಾಯಾಲಯಗಳಲ್ಲಿ ವಿವಿಧ ರೀತಿಯ ಪ್ರಕರಣ ಮತ್ತು ಜನರು ಬರುತ್ತಾರೆ. ಅವರ ಸಮಸ್ಯೆಗಳನ್ನು ಆಲಿಸಿ ಅವರ ಪ್ರಕರಣಕ್ಕೆ ನ್ಯಾಯ ಒದಗಿಸಲು ಶ್ರಮ ವಹಿಸಬೇಕು ಎಂದರು.

ಸ್ಥಳೀಯ ಆಡಳಿತ ಮಂಡಳಿ ಚೇರಮನ್ ಎಸ್.ಎ. ಮಾನ್ವಿ ಮಾತನಾಡಿ, ಕಾನೂನು ಜ್ಞಾನ ಸಂಪಾದನೆ ನಂತರ ಸಮಾಜಸೇವೆಗೆ ಆದ್ಯತೆ ನೀಡುವುದು ಕೂಡ ಅವಶ್ಯಕವಾಗಿದೆ. ಆದ್ದರಿಂದ ವಕೀಲರು ಸಮಾಜದಲ್ಲಿನ ಸಾರ್ವಜನಿಕ ಹಿತಾಸಕ್ತಿಗಳಿಗೆ ಸಂಬಂಧಿಸಿದ ಕಾರ್ಯಗಳಲ್ಲಿ ಕೈಜೋಡಿಸಬೇಕು ಎಂದರು.

> ಕಾಲೇಜಿನ ಪ್ರಾಚಾರ್ಯ ಜೈಹನುಮಾನ ಎಚ್.ಕೆ ಮಾತನಾಡಿ, ವಿದ್ಯಾರ್ಥಿ ದಿಸೆಯಲ್ಲಿ ಕಾನೂನು ಪುಸ್ತಕದ ಜ್ಞಾನದ ಜೊತೆಗೆ ಪ್ರಾಯೋಗಿಕ ತರಬೇತಿ ಕೂಡ ಬಹಳ ಅಗತ್ಯವಾಗಿದೆ. ಇತ್ತೀಚಿನ ವಕೀಲರು ವಾದ ಮಂಡನೆ, ವಾದ ಸೇರಿದಂತೆ ಸಾಕ್ಷಿಗಳನ್ನು ಯಾವ ರೀತಿಯಲ್ಲಿ ಸಾದರಪಡಿಸಬೇಕೆಂಬುದನ್ನು ಅರಿಯಬೇಕಿದೆ ಎಂದರು.

ವಕೀಲರು ಹಾಗೂ ಸಿಂಡಿಕೇಟ್ ಸದಸ್ಯ ಮೋಹನ ಭಜಂತ್ರಿ, ಸ್ಥಾನಿಕ ಆಡಳಿತ ಮಂಡಳಿಯ ಸದಸ್ಯರಾದ ಎಸ್.ಎಫ್. ಹಾದಿಮನಿ, ಬಿ.ಜಿ. ಶಿಳ್ಳಿಕೇರಿ, ಹಿರಿಯ ನ್ಯಾಯವಾದಿಗಳಾದ ಜಿ.ಸಿ. ರೇಶ್ಮಿ, ಬಿ.ಎ. ಹಿರೇಮಠ, ಸಿ.ಎಸ್. ರಾಚಣ್ಣವರ, ಗುರುರಾಜ ಗೌರಿ ಇದ್ದರು.

ಉಪನ್ಯಾಸಕ ಡಾ. ವಿಜಯ ಮುರದಂಡೆ ವಾರ್ಷಿಕ ವರದಿಯನ್ನು ವಾಚಿಸಿದರು. ಡಾ. ಶ್ರೀನಿವಾಸ ಪಾಲ್ಕೊಂಡ ಸ್ವಾಗತಿಸಿದರು. ವಿದ್ಯಾರ್ಥಿಗಳಾದ ಚೈತ್ರ ಗೌಡ್ರ, ಶೃತಿ ಇಂಡಿ ಪ್ರಾರ್ಥಿಸಿದರು. ವಿದ್ಯಾರ್ಥಿನಿ ಭೂಮಿಕಾ ಉಪಾಧ್ಯ ನಿರೂಪಿಸಿದರು. ವಿದ್ಯಾರ್ಥಿ ಪ್ರತಿನಿಧಿ ಸಂತೋಷ ಭದ್ರಾಪೂರ ವಂದಿಸಿದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಸತಿ ನಿಲಯಗಳಾದ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ, ಎಸ್.ಎಮ್. ಕೃಷ್ಣ ನಗರ,ಗದಗ; ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯ, ಕಳಸಾಪುರ ರೋಡ್ , ಗದಗ; ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ, ಎಸ್.ಎಮ್. ಕೃಷ್ಣ ನಗರ, ಗದಗ-2, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯ, ಕಳಸಾಪುರ ರೋಡ್, ಗದಗ-2, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯ, ಬದಾಮಿ ರೋಡ್ ರೋಣ; ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯ, ಪಿ.ಯು. ಕಾಲೇಜು ಎದುರುಗಡೆ, ಕೊಪ್ಪಳ ರೋಡ್, ಮುಂಡರಗಿ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ, ಕುಷ್ಟಗಿ ರೋಡ್, ಗಜೇಂದ್ರಗಡ; ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ, ಹೊಸಮನಿ ಬಿಲ್ಡಿಂಗ್, ಗಜೇಂದ್ರಗಡ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ, ಹೊಸಮನಿ ಬಿಲ್ಡಿಂಗ್, ನರಗುಂದ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ, ದೇಸಾಯಿ ಬಣ, ಬಾಳಿಗೇರಿ ಓಣಿ, ಲಕ್ಷ್ಮೇಶ್ವರ ಈ ವಸತಿ ನಿಲಯಗಳಲ್ಲಿ ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮಾ ಹಾಗೂ ಪ್ರಥಮ ವರ್ಷದ ಪದವಿ ಮಟ್ಟದ ಕೋರ್ಸ್‌ಗಳಿಗೆ ಪ್ರವೇಶಾತಿಗಾಗಿ ಎಸ್‌ಎಚ್‌ಪಿ (ಸ್ಟೇಟ್ ಹಾಸ್ಟೆಲ್ ಪೋರ್ಟಲ್) ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪೋಷಕರು/ವಿದ್ಯಾರ್ಥಿಗಳು ವೆಬ್‌ಸೈಟ್ ವಿಳಾಸ https://shp.karnataka.gov.in ಮೂಲಕ ಜೂನ್ 28 ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಿ ಅರ್ಜಿ ಪ್ರತಿ ಹಾಗೂ ಎಲ್ಲಾ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಗಳಿಗೆ ನೀಡಬೇಕು.

ಹೆಚ್ಚಿನ ಮಾಹಿತಿಗಾಗಿ ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಹಾಗೂ ಹತ್ತಿರದ ವಸತಿ ನಿಲಯಗಳಿಗೆ ಭೇಟಿ ನೀಡಿ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### 'ಸಮಾನತೆಗಾಗಿ ನಾವು-ನೀವು' ಕಾರ್ಯಕ್ರಮದಲ್ಲಿ ನಟ ಚೇತನ್ ಅಹಿಂಸಾ

## ಜನತೆಯ ಕಷ್ಟಗಳಿಗೆ ಸ್ಪಂದಿಸುವ ರಾಜಕಾರಣ ಬೇಕು

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಶಿಕ್ಷಣ ಮತ್ತು ಆರೋಗ್ಯವು ವ್ಯಾಪಾರೀಕರಣವಾಗುತ್ತಿದೆ. ಹಾಗಾಗಿ ಸಮ ಸಮಾಜ ನಿರ್ಮಾಣಕ್ಕೆ ರಾಜ್ಯದಲ್ಲಿ ಹೊಸ ರಾಜಕೀಯ ಪಕ್ಷದ ರಚನೆ ಅಗತ್ಯವಾಗಿದೆ ಎಂದು ನಟ ಚೇತನ್ ಅಹಿಂಸಾ ಹೇಳಿದರು.

ಅವರು ಶನಿವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ 'ಸಮಾನತೆಗಾಗಿ ನಾವು-ನೀವು' ಎಂಬ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.




ನಾವು ಯಾವುದೇ ಪಕ್ಷದ ವಿರೋದಿಗಳಲ್ಲ. ರಾಜ್ಯದಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಜನತೆಯ ಕಷ್ಟಗಳಿಗೆ ಸ್ಪಂದಿಸುವ ಪರ್ಯಾಯ ರಾಜಕಾರಣದ ಅವಶ್ಯಕತೆ ಹೆಚ್ಚಾಗಿದೆ. ಅನ್ಯಾಯ, ಅಸಮಾನತೆಯಿಂದ ಕೂಡಿದ ವ್ಯವಸ್ಥೆ ಇಂದು ಹೆಚ್ಚಾಗಿದ್ದು, ರಾಜಕಾರಣಿಗಳು ಅಧಿಕಾರ, ಹಣ, ಸ್ವಹಿತಾಸಕ್ತಿಗಾಗಿ ಕೆಲಸ ಮಾಡುತ್ತಿದ್ದಾರೆ ಎಂದು ದೂರಿದರು.

ಜಾತಿ ಲಿಂಗ ಅಸಮಾನತೆ ದೇಶದ ವ್ಯವಸ್ಥೆಯ ಮೊದಲ ಶತ್ರುವಾಗಿದೆ, ಇದಕ್ಕೆ ರಾಜಕಾರಣಿಗಳ ಇಚ್ಛಾಶಕ್ತಿಯ ಕೊರತೆ ಇದೆ. ಪಾರದರ್ಶಕ ನೀತಿಗಳಿಗಾಗಿ ಲೋಕಾಯುಕ್ತ ಬಲಪಡಿಸಬೇಕಾಗಿದೆ. ಬಂಡವಾಳಶಾಹಿ ವ್ಯವಸ್ಥೆಗೆ ಪ್ರತಿರೋಧ ಒಡ್ಡಬೇಕಾಗಿದೆ.

> ಪ್ರಗತಿಪರ ಚಿಂತಕ ಕೋಡಿಹಳ್ಳಿ ಭೀಮಪ್ಪ ಮಾತನಾಡಿ, ಇಂದಿನ ರಾಜಕಾರಣಿಗಳು ಮಾನವೀಯ ಮೌಲ್ಯಗಳನ್ನು ಮರೆತು ಕೇವಲ ಹಣ, ಹೆಂಡ ಮತ್ತು ಕೋಮುಗಲಭೆಗಳನ್ನು ಹೆಚ್ಚಿಸುವ ಮೂಲಕ ಜನರನ್ನು ಮಾನಸಿಕವಾಗಿ ತಮ್ಮ ಹಿಡಿತದಲ್ಲಿ ಇಟ್ಟುಕೊಂಡು ಮೋಸ ಮಾಡುವ ಕೆಲಸದಲ್ಲಿ ನಿರತರಾಗಿದ್ದಾರೆ ಎಂದರು.

ಆದ್ದರಿಂದ ಸಮಾನತೆಗಾಗಿ ಹೊಸ ರಾಜಕೀಯ ಪಕ್ಷದ ರಚನೆ ಬೇಕು. ಆ ರೀತಿ ಪಕ್ಷ ಸ್ಥಾಪಿಸಿ ಕನಿಷ್ಠ 25ರಿಂದ 50 ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ನಿಲ್ಲಿಸಬೇಕು. ಆ ನಿಟ್ಟಿನಲ್ಲಿ ಒಂದು ವರ್ಷದ ಮುಂಚಿತವಾಗಿ ಸಂಘಟನೆ ಮಾಡುವುದಾಗಿ ಅವರು ಹೇಳಿದರು.

ವಕೀಲ ಬಸವರಾಜ ಸಂಗಪ್ಪನವರ್ ಮಾತನಾಡಿ, ಇಂದು ಎಲ್ಲಾ ಕ್ಷೇತ್ರಗಳಲ್ಲೂ ಅಸಮಾನತೆ ಇದೆ. ಸಮಾನತೆಗಾಗಿ ಸಂಗಾತಿಗಳನ್ನು ಸೇರಿಸಿ ನಟ ಚೇತನ ಸಭೆ, ಸಂವಾದ ಮಾಡುತ್ತಿದ್ದಾರೆ. ನಾಡಿನಾದ್ಯಂತ ವೈಚಾರಿಕತೆ ಮೂಡಿಸುವ ಉತ್ತಮ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಸಾಹಿತಿ ಇಸ್ಮಾಯಿಲ್ ಎಲಿಗಾರ, ರೈತ ಸಂಘದ ಮುಖಂಡ ಮಹೇಶ್ವರಸ್ವಾಮಿ ಸಂವಾದ ನಡೆಸಿದರು. ಮುಖಂಡರಾದ ಕೆ.ಎಂ. ಬಸವರಾಜಯ್ಯ, ಎಚ್.ಎಂ. ಸಂತೋಷ, ಮಾಲತೇಶ ಮರಿಗೌಡರು, ಗುಡಿಹಳ್ಳಿ ಹಾಲೇಶ, ಸಂದೇರ ಪರಶುರಾಮ, ಸುಭಾಷ್, ಹೇಮಣ್ಣ ಮೋರಗೇರಿ, ಕಬ್ಬಳ್ಳಿ ಮೈಲಪ್ಪ, ಇರ್ಫಾನ್ ಮುದುಗಲ್, ವೆಂಕಟೇಶ್ ನಾಯ್ಕ, ಭರಮಣ್ಣ, ಮುನ್ನಾ, ಮಂಜುನಾಥ, ಜಿಶನ್, ಡಾ. ಬಸವರಾಜ, ಉಮೇಶ, ಚಿಗರಿ ವೆಂಕಟೇಶ, ಆನಂದ ಮುಂತಾದವರಿದ್ದರು.

## ಮೊರಾರ್ಜಿ ದೇಸಾಯಿ ಶಾಲೆಗೆ ಆಯ್ಕೆ












■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಅಡ ವಿಸೋಮಾಪೂರ ದೊಡ್ಡ ತಾಂಡೆ (ಜಲಾಶಂಕರ ನಗರ) ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ 10ವಿದ್ಯಾರ್ಥಿಗಳು ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಆಯ್ಕೆಯಾಗಿದ್ದಾರೆ.

2025-26ನೇ ಸಾಲಿನಲ್ಲಿ ಮೊರಾರ್ಜಿ ವಸತಿ ಶಾಲೆಯ ಪ್ರವೇಶ ಪರೀಕ್ಷೆಯಲ್ಲಿ ಸದರಿ ಶಾಲೆಯ ಯೋಗೇಶ್ವರಿ ಕೃಷ್ಣಪ್ಪ ರಾಠೋಡ, ನಂದಿನಿ ಕೃಷ್ಣಪ್ಪ ಲಮಾಣಿ, ಶಾರನ್ನರಾಮದಾಸ ಲಮಾಣಿ, ಸಂಜಯ ರಮೇಶ ಲಮಾಣಿ, ದೀಪಕ ಗಣೇಶ ರಾಠೋಡ, ಭೂಮಿಕಾ ಕಾಂತೇಶ ಲಮಾಣಿ, ವಿಜಯಲಕ್ಷ್ಮೀ ಅನಿಲಕುಮಾರ ರಜಪೂತ, ನೇಹಾ ಸುಭಾಸ ಲಮಾಣಿ, ಸ್ನೇಹಾ ಹನಮಂತ ಕಾರಬಾರಿ, ಸ್ವಾತಿ ಶಿವಕುಮಾರ ರಜಪೂತ ಆಯ್ಕೆಯಾಗಿದ್ದಾರೆ ಎಂದು ಶಾಲೆಯ ಮುಖ್ಯ ಶಿಕ್ಷಕ ವೈ.ಎಸ್. ಅರ್ಕಸಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೇಜಸ್ವಿನಿ ಹಿಪ್ಪರಗಿಗೆ ಪಿಎಚ್‌ಡಿ

■ವಿಜಯಸಾಕ್ಷಿ ಸುದ್ದಿ, ವಿಜಯಪುರ



ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯವು ತೇಜಸ್ವಿನಿ ಹಿಪ್ಪರಗಿ ಅವರು ಸಲ್ಲಿಸಿದ್ದ 'ಐಡೆಂಟಿಫಿಕೇಶನ್ ಅಂಡ್ ವ್ಯಾಲಿಡೇಶನ್ ಆಫ್ ಪ್ಲ್ಯಾಂಟ್ ಬೇಸ್ಡ್ ಬಯೋಆಕ್ಟೀವ್ ಕಂಪೌಂಡ್ಸ್ ಫಾರ್ ಇಮ್ಯೂನೋಮೋಡೂಲೇಟರಿ ಅಂಡ್ ಅಂಟಿಇನ್‌ಪ್ಲಾಮೇಟೋರಿ ಪ್ರಾಪೋರ್ಟಿಸ್' ಕುರಿತು ಸಲ್ಲಿಸಿದ್ದ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪದವಿ ನೀಡಿದೆ.

ತೇಜಸ್ವಿನಿ ಹಿಪ್ಪರಗಿ ಅವರು ಬಯೋ ಇನ್ಫಾರ್ಮೆಟಿಕ್ಸ್ ವಿಭಾಗದ ಡಾ. ಬಾಬು ಆರ್.ಎಲ್ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದರು. ಡಾಕ್ಟರೇಟ್ ಪದವಿ ಪಡೆದಿರುವ ತೇಜಸ್ವಿನಿ ಹಿಪ್ಪರಗಿ ಅವರನ್ನು ಹಂಗಾಮಿ ಕುಲಪತಿ ಪ್ರೊ. ಶಾಂತಾದೇವಿ ಟಿ, ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್.ಎಂ. ಚಂದ್ರಶೇಖರ ಅಭಿನಂದಿಸಿದ್ದಾರೆ.

## ವಿಕಸಿತ ಕೃಷಿ ಸಂಕಲ್ಪ ಅಭಿಯಾನ




■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ ಅಂಗವಾಗಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರವು ಕರ್ನಾಟಕ ರಾಜ್ಯ ಕೃಷಿ ಇಲಾಖೆ ಹಾಗೂ ಇತರೆ ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ದಿನಾಂಕ 29-05-2025 ರಿಂದ 12-06-2025 ರ ವರೆಗೆ ಗದಗ ಜಿಲ್ಲೆಯ ಎಲ್ಲ ತಾಲೂಕುಗಳ ವಿವಿಧ ಗ್ರಾಮಗಳಲ್ಲಿ ಕೃಷಿ ತರಬೇತಿ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಕರ್ನಾಟಕ ರಾಜ್ಯ ಕೃಷಿ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡಿದೆ.

ಈ ಹಿನ್ನೆಲೆಯಲ್ಲಿ ರೋಣ ತಾಲೂಕಿನ ಆರು ಗ್ರಾಮಗಳಾದ ಮುದೇನಗುಡಿ, ಹಿರೇಮಣ್ಣೂರು, ತಳ್ಳಿಹಾಳ, ಅಸೂಟಿ, ಕರಮುಡಿ ಹಾಗೂ ಮೇಲಮಠ ಗ್ರಾಮಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಆಯೋಜಿಸಲಾಗಿತ್ತು. ಐ.ಸಿ.ಎ.ಆರ್-ಗೋಡಂಬಿ ಸಂಶೋಧನಾ ನಿರ್ದೇಶನಾಲಯದ ವಿಜ್ಞಾನಿಗಳು, ಕರ್ನಾಟಕ ಸರಕಾರದ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು, ಕೃಷಿ ಅಧಿಕಾರಿಗಳು, ಆತ್ಮಾ ಸಿಬ್ಬಂದಿ, ಕೃಷಿ ಸಖಿಯರು, ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರುಗಳು, ಪಶು ಸಖಿಯರು, ಸ್ಥಳೀಯ ಚುನಾಯಿತ ಪ್ರತಿನಿಧಿಗಳು, ರೈತ ಮುಖಂಡರು ಈ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

ಈ ಅಭಿಯಾನದಲ್ಲಿ ವಿವಿಧ ತಂತ್ರಜ್ಞಾನಗಳಾದ ಬೀಜೋಪಚಾರ, ಸುಧಾರಿತ ತಳಿಗಳು, ತೋಟಗಾರಿಕೆ ಬೆಳೆಗಳು, ಸಿರಿಧಾನ್ಯ ಹಾಗೂ ಅವುಗಳ ಮಹತ್ವ, ಕೃಷಿ ಯಂತ್ರೋಪಕರಣಗಳು, ಸಮಗ್ರ ಕೃಷಿ ಪದ್ಧತಿಗಳ ತರಬೇತಿ ನೀಡಲಾಯಿತು. ಮುಂಗಾರು ಬೆಳೆಗಳ ಬೇಸಾಯ ಕ್ರಮಗಳು, ಕೀಟ ಹಾಗೂ ರೋಗ ನಿರ್ವಹಣೆ ಬಗ್ಗೆ ಮಾಹಿತಿ ಕೈಪಿಡಿ, ಕೃಷಿ ಹಾಗೂ ತೋಟಗಾರಿಕೆ ಇಲಾಖೆಗಳ ಯೋಜನೆಗಳ ಬಗ್ಗೆ ಹಸ್ತಪ್ರತಿಗಳನ್ನು ವಿತರಿಸಲಾಯಿತು.

### ಸಿಸಿ ರಸ್ತೆ ಕಾಮಗಾರಿಗೆ ಕಳಪೆ ಸಾಮಗ್ರಿಗಳ ಬಳಕೆ ಆರೋಪ

## ಜಿಲ್ಲಾಧಿಕಾರಿಗಳೇ ಪರೀಕ್ಷೆಗೆ ಸೂಚಿಸಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪೇಟೆ ಹಾವಳಿ ಹನುಮಂತದೇವರ ದೇವಸ್ಥಾನದಿಂದ ದೂದನಾನಾ ದರ್ಗಾವರೆಗೆ ನಡೆಯುತ್ತಿರುವ ಸಿಸಿ ರಸ್ತೆ ಕಾಮಗಾರಿಗೆ ಕಳಪೆ ಸಾಮಗ್ರಿಗಳನ್ನು ಬಳಸುತ್ತಿದ್ದಾರೆ ಎಂದು ಸಾರ್ವಜನಿಕರು ಆರೋಪಿಸಿದ್ದು, ಈ ಕುರಿತು ಅಧಿಕಾರಿಗಳು ಸ್ಥಳಕ್ಕೆ ಬಂದು ಪರಿಶೀಲಿಸುವಂತೆ ಆಗ್ರಹಿದರು.

ಬಹುದಿನಗಳ ನಂತರ ಪೇಟೆಯ ಈ ಪ್ರಮುಖ ರಸ್ತೆಯ ದುರಸ್ಥಿಯ ಬೇಡಿಕೆ ಈಡೇರುತ್ತಿದ್ದು, ಸುಮಾರು 76 ಲಕ್ಷ ರೂಗಳ ವೆಚ್ಚದಲ್ಲಿ ಈ ಕಾಮಗಾರಿ ನಡೆಯುತ್ತಿದೆ. ಸಿಸಿ ರಸ್ತೆಗಾಗಿ ರಸ್ತೆ ಅಗೆಯಲಾಗಿದೆ. ಅದಕ್ಕಾಗಿ ರಾತ್ರೋರಾತ್ರಿ ಕಳಪೆ ಗುಣಮಟ್ಟದ, ಮಿಶ್ರಿತ ಮಣ್ಣು ರಸ್ತೆಗೆ ಹಾಕುತ್ತಿರುವದರಿಂದ ರಸ್ತೆ ಗುಣಮಟ್ಟದಿಂದ ಆಗಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ. ಶನಿವಾರ ಈ ಕುರಿತು ಕಾಮಗಾರಿ ನಡೆಯುತ್ತಿರುವ ಸ್ಥಳಕ್ಕೆ ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ಹಾಗೂ ಮುಖ್ಯಾಧಿಕಾರಿ ಮಹೇಶ ಹಡಪದ ಅವರನ್ನು ಕರೆಯಿಸಿ ಕಳಪೆ ಮಣ್ಣು ಬಳಸುತ್ತಿರುವದನ್ನು ತೋರಿಸಿದರು.



> ಇದು ಪಟ್ಟಣದ ಪ್ರಮುಖ ರಸ್ತೆಯಾಗಿದ್ದು, ಗುಣಮಟ್ಟದ ಕಾಮಗಾರಿ ಆಗಬೇಕೆನ್ನುವದು ಆಡಳಿತ ಮಂಡಳಿಯ ಉದ್ದೇಶವಾಗಿದೆ. ಕಳಪೆ ವಸ್ತುಗಳನ್ನು ಬಳಸಿದ್ದರೆ ಅದನ್ನು ತೆಗೆಸಿ ಗುಣಮಟ್ಟದಲ್ಲಿ ಕಾಮಗಾರಿ ಮಾಡುವಂತೆ ನಿರ್ದೇಶನ ನೀಡಲಾಗುವದು.
>
> – ಯಲ್ಲವ್ವ ದುರಗಣ್ಣವರ.
> ಪುರಸಭೆ ಅಧ್ಯಕ್ಷೆ.

ಈ ವೇಳೆ ಮಾತನಾಡಿದ ಯುವ ಮುಖಂಡ ಮಂಜುನಾಥ ಮಾಗಡಿ ಹಾಗೂ ನಾಗರಾಜ ಚಿಂಚಲಿ, ಬಹಳ ವರ್ಷಗಳ ಬೇಡಿಕೆಯಾದ ಪಟ್ಟಣದ ಹಾವಳಿ ಹನುಮಂತ ದೇವಸ್ಥಾನದಿಂದ ದೂದನಾನಾ ದರ್ಗಾವರೆಗಿನ ಈ ರಸ್ತೆ ಕಾಮಗಾರಿಗೆ 2024-25ಸಾಲಿನ ಪುರಸಭೆಯ 15ನೇ ಹಣಕಾಸಿನ ಮೂಲ ಅನುದಾನ ಅಂದಾಜು 76 ಲಕ್ಷ ವೆಚ್ಚದಲ್ಲಿ ಬಜಾರ ಚಾವಡಿಯಿಂದ 260 ಮೀಟರ್ ಸಿಸಿ ರಸ್ತೆ ಕಾಮಗಾರಿ ಪ್ರಾರಂಭಗೊಂಡಿದ್ದು, ಮೊರಂ ಹಾಕಬೇಕಾಗಿದ್ದ ಜಾಗೆಯಲ್ಲಿ ಮಣ್ಣು, ಗೊರಸು, ಹಳ್ಳು ಇರುವ ಮಣ್ಣನ್ನು ಹಾಕಲಾಗಿದೆ. ಇದರಿಂದ ಕಾಮಗಾರಿ ಕಳಪೆ ಆಗುವ ಸಂಭಂವವಿದೆ. ಜಿಲ್ಲಾಧಿಕಾರಿಗಳು ಖುದ್ದಾಗಿ ಬಂದು ಮಣ್ಣು ಪರೀಕ್ಷೆಗೆ ನಿರ್ದೇಶನ ನೀಡಬೇಕೆಂದು ಆಗ್ರಹಿಸಿದರು.

ಅದೇ ರೀತಿ ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ಸವಳು ನೀರು ಹಾಗೂ ಸಿಹಿ ನೀರು ಒದಗಿಸುವ ಪೈಪ್‌ಲೈನ್‌ಗಳು ಒಡೆದಿದೆ. ಮೊದಲು ಇದನ್ನು ಸರಿಪಡಿಸಿ ನಂತರ ಕಾಮಗಾರಿ ಆಗುವ ರಸ್ತೆ ಕಾಮಗಾರಿ ಪ್ರಾರಂಭಿಸಬೇಕು. ಗುಣಮಟ್ಟದ ಕಾಮಗಾರಿ ಕೈಗೊಳ್ಳಲು ಗುತ್ತಿಗೆದಾರರಿಗೆ ಸಂಬಂಧಪಟ್ಟ ಅಧಿಕಾರಿಗಳು ನಿರ್ದೇಶನ ನೀಡಬೇಕೆಂದು ಆಗ್ರಹಿಸಿದರು.

ಮುಖ್ಯ ಬಜಾರ್ ರಸ್ತೆ ಕಾಮಗಾರಿ ಪ್ರಾರಂಭಿಸಿದ್ದು, ಮಣ್ಣು ಸರಿಯಾಗಿಲ್ಲ ಎಂದು ಸಾರ್ವಜನಿಕರು ಆರೋಪಿಸುತ್ತಿದ್ದಾರೆ. ಮಣ್ಣು ಪರೀಕ್ಷೆ ಮಾಡಿಸಿ ಪರೀಕ್ಷೆಯಲ್ಲಿ ದೋಷ ಕಂಡುಬಂದರೆ ಗುತ್ತಿಗೆದಾರರಿಗೆ ಹೇಳಿ ಬೇರೆ ಮಣ್ಣನ್ನು ಹಾಕಲು ತಿಳಿಸುವದಾಗಿ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ, ಅಭಯ ಜೈನ್, ಗುರಪ್ಪ ಮುಳಗುಂದ, ಭರಮಪ್ಪ ಮ್ಯಾಗೇರಿ, ಸಾಗರ ಕಲಾಲ, ಪವನ ಬಂಕಾಪುರ ಮುಂತಾದವರು ಇದ್ದರು.

## ಕುರುಬ ವೀರಗೊಲ್ಲಾಳ ಶರಣರ ಕುರಿತು ಉಪನ್ಯಾಸ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಜೂನ್ 1ರ ಬೆಳಿಗ್ಗೆ 7.30ಕ್ಕೆ ನಡೆಯಲಿರುವ ಬಸವದಳದ 1648ನೇ ಶರಣ ಸಂಗಮದಲ್ಲಿ ಸಹಜ ಶಿವಯೋಗ ಹಾಗೂ ಕುರುಬ ವೀರಗೊಲ್ಲಾಳ ಶರಣರ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣ ವಿ.ಕೆ. ಕರೇಗೌಡ್ರ ವಹಿಸುವರು.



ಶರಣೆ ರೇಣಕ್ಕ ಕರೇಗೌಡ್ರ ಸಹಜ ಶಿವಯೋಗ ನಡೆಸುವರು ಹಾಗೂ ಶರಣೆ ಗಿರಿಜಕ್ಕ ಧರ್ಮರಡ್ಡಿ ಉಪನ್ಯಾಸ ನೀಡುವರು.

ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಗಳಿ, ಗೌರವಾಧ್ಯಕ್ಷ ನಾಗರಾಜ ಎಂ.ಮೆಣಸಗಿ ಇವರುಗಳು ಅತಿಥಿಗಳಾಗಿ ಆಗಮಿಸುವರು. ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ಉತ್ಖನನ ಕಾಮಗಾರಿಗೆ ಚಾಲನೆ ನೀಡಲಿರುವ ಸಿ.ಎಂ ಸಿದ್ಧರಾಮಯ್ಯ | ಕಾರ್ಯಕ್ರಮ ಯಶಸ್ವಿಗೊಳಿಸಲು ಸಿ.ಸಿ. ಪಾಟೀಲ ವಿನಂತಿ

# ಲಕ್ಕುಂಡಿಯ ವೈಭವ ಮರುಕಳಿಸಲಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಉತ್ಖನನ ಕಾಮಗಾರಿಗೆ ಚಾಲನೆ ನೀಡಲು ಜೂನ್ 3ರಂದು ಲಕ್ಕುಂಡಿಗೆ ಆಗಮಿಸಲಿದ್ದು, ಗ್ರಾಮದ ಸರ್ವರೂ ಪಕ್ಷಾತೀತವಾಗಿ ಅವರನ್ನು ಬರಮಾಡಿಕೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಶಾಸಕ ಸಿ.ಸಿ. ಪಾಟೀಲ ವಿನಂತಿಸಿಕೊಂಡರು.

ಇಲ್ಲಿಯ ಗ್ರಾಮ ಪಂಚಾಯಿತಿ ಆವರಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ಹಾಗೂ ಸಿ.ಎಂ. ಸಿದ್ಧರಾಮಯ್ಯ ಅವರು ಆಗಮನದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜೂನ್ 3ರಂದು ಲಕ್ಕುಂಡಿ ಗ್ರಾಮಕ್ಕೆ ಸಿ.ಎಂ ಸಿದ್ಧರಾಮಯ್ಯನವರು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಆಶ್ರಯದಲ್ಲಿ ನಡೆಯಲಿರುವ ಉತ್ಖನನ ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ.



> ಉತ್ಖನನದ ನೆಪದಲ್ಲಿ ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರವು ಜನವಸತಿ ಕುಟುಂಬಗಳಿಗೆ ತೊಂದರೆ ಕೊಡಬಾರದು. ಜನರನ್ನು ಒಕ್ಕಲೆಬ್ಬಿಸುವಂತಹ ಕಾರ್ಯ ನಡೆಸಬಾರದು
> – ಸಿ.ಸಿ. ಪಾಟೀಲ.
> ಶಾಸಕರು.

ಪಕ್ಷಾತೀತವಾಗಿ ಸಿ.ಎಂ ಅವರನ್ನು ಸ್ವಾಗತಿಸಿ ಯಶಸ್ವಿಗೊಳಿಸಬೇಕು. ಪ್ರವಾಸೋದ್ಯಮ ಬೆಳೆಯಲು ಪ್ರವಾಸಿಗರಿಗೆ ಮೂಲಭೂತ ಸೌಲಭ್ಯ ಕುರಿತು, ಪ್ರಥಮದರ್ಜೆ ಕಾಲೇಜು ಸೇರಿದಂತೆ ಪ್ರಮುಖ ಬೇಡಿಕೆಗಳನ್ನು ಗ್ರಾಮದ ವತಿಯಿಂದ ಸಲ್ಲಿಸಲು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರ ಹಾಗೂ ಗ್ರಾಮ ಪಂಚಾಯಿತಿ ವತಿಯಿಂದ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕೇಂದ್ರ ಸರಕಾರದಿಂದ ಅನುಮತಿ ಪಡೆದು ಉತ್ಖನನ ಕಾಮಗಾರಿ ಮಾಡುತ್ತಿರುವುದರಿಂದ ಲಕ್ಕುಂಡಿ ವೈಭವ ಮರುಕಳಿಸಲಿದೆ. ಗ್ರಾಮದಲ್ಲಿ 72.80 ಲಕ್ಷ ರೂ ವೆಚ್ಚದಲ್ಲಿ ಶಾಲೆ, ಗ್ರಂಥಾಲಯ, ಅಂಗನವಾಡಿ ಕಟ್ಟಡಗಳನ್ನು ಲೋಕಾರ್ಪಣೆಗೊಳಿಸಲಾಗಿದೆ. 79.96 ಲಕ್ಷ ರೂಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಚಾಲನೆ ನೀಡಲಾಗಿದ್ದು, ಗ್ರಾಮಸ್ಥರು ಸದುಪಯೋಗಪಡಿಸಿಕೊಳ್ಳಬೇಕೆಂದರು.

> ಸರಕಾರದ ವಿವಿಧ ಸೌಲಭ್ಯವನ್ನು ಪಡೆಯಲು ಗ್ರಾಮಸ್ಥರು ಗದಗ ಶಹರಕ್ಕೆ ಅಲೆದಾಡುತ್ತಿದ್ದು, ಗ್ರಾಮಕ್ಕೆ ನಾಡ ಕಾರ್ಯಾಲಯನ್ನು ಸ್ಥಾಪಿಸಬೇಕೆಂದು ಮರಿಯಪ್ಪ ವಡ್ಡರ ಆಗ್ರಹಿಸಿದರು. ಶೈಕ್ಷಣಿಕ ಅಭಿವೃದ್ಧಿಗೆ ಪ್ರಥಮದರ್ಜೆ ಕಾಲೇಜು, ಪಿ.ಯು ವಿಜ್ಞಾನ ಕಾಲೇಜು ಸ್ಥಾಪಿಸಬೇಕು. ಉತ್ಖನನ ಮಾಡುವ ಬಗ್ಗೆ ಗ್ರಾಮಸ್ಥರಲ್ಲಿ ಭಯದ ವಾತವಾರಣವಿದ್ದು, ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರವು ಸೂಕ್ತ ಮಾಹಿತಿ ನೀಡಬೇಕು ಎಂದು ನಿವೃತ್ತ ಸೈನಿಕ ದತ್ತಾತ್ರೇಯ ಜೋಶಿ ಸಲಹೆ ನೀಡಿದರು. ಗ್ರಾಮದ ಸ್ವಚ್ಛತೆಗೆ ಗ್ರಾ.ಪಂ ಮುಂದಾಗಬೇಕು ಎಂದು ಅಜ್ಜಣ್ಣ ಪಾಟೀಲ ಒತ್ತಾಯಿಸಿದರು.

ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ ಮಾತನಾಡಿ, ಇತ್ತೀಚೆಗೆ ಗ್ರಾಮದಲ್ಲಿ ಪ್ರಾಚ್ಯಾವಶೇಷಗಳ ಅನ್ವೇಷಣೆಯ ಸಂದರ್ಭದಲ್ಲಿ 1500ಕ್ಕೂ ಹೆಚ್ಚು ಅವಶೇಷಗಳು ದೊರೆತಿದ್ದವು. ಅವುಗಳ ಬಯಲು ವಸ್ತುಸಂಗ್ರಾಲಯ ಮಾಡಲು ಬಜೆಟ್‌ನಲ್ಲಿ ಘೋಷಿಸಿರುವಂತೆ ಸಿ.ಎಂ ಅವರು ಭೂಮಿಪೂಜೆ ನೆರವೇರಸಲಿದ್ದು, ಶಾಸಕ ಸಿ.ಸಿ. ಪಾಟೀಲರ ಮಾರ್ಗದರ್ಶನದಲ್ಲಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ವಿನಂತಿಸಿಕೊಂಡರು.

ಲಕ್ಕುಂಡಿ ಪ್ರಾದೇಶಿಕ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ಮಾತನಾಡಿ, 11 ಮತ್ತು 12ನೇ ಶತಮಾನದಿಂದ ಕಲ್ಯಾಣ ಚಾಲುಕ್ಯರು, ಹೊಯ್ಸಳರು ಸೇರಿದಂತೆ ಹಲವಾರು ರಾಜರು ಆಳಿ ಈ ನೆಲವನ್ನು ಸ್ವರ್ಗವನ್ನಾಗಿ ಮಾಡಿದ್ದರು. ಆ ಗತ ವೈಭವ ಮತ್ತೆ ಮರುಕಳಿಸಲು ಮತ್ತು ವಿಶ್ವ ಪಾರಂಪರಿಕ ಪಟ್ಟಿಗೆ ಸೇರಲು ಉತ್ಖನನ ಕಾರ್ಯದೊಂದಿಗೆ ಗ್ರಾಮಸ್ಥರ ಸಹಕಾರ ಪ್ರಮುಖವಾಗಿದೆಪ್ರಿದರಿಂದ ಅಮೂಲ್ಯ ಅವಶೇಷಗಳ ದೊರೆತು ಇಡೀ ಜಗತ್ತೇ ಲಕ್ಕುಂಡಿಯನ್ನು ನೋಡುವಂತಾಗಬೇಕಿದೆ ಎಂದರು.



ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಗ್ರಾಮದ ದೇಗುಲದ ಪಕ್ಕ ಮತ್ತು ರಸ್ತೆಯ ಪಕ್ಕದಲ್ಲಿ ಇರುವ ತಿಪ್ಪೆಗಳನ್ನು, ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡು ಮುಖ್ಯಮಂತ್ರಿಗಳ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಹೇಳಿದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಜಿ.ಪಂ ಮಾಜಿ ಸದಸ್ಯ ಎಸ್.ಬಿ. ಕಲಕೇರಿ, ತಾ.ಪಂ ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ, ವಸಂತ ಮೇಟಿ, ಈಶ್ವರಪ್ಪ ಕುಂಬಾರ, ಗ್ರಾ.ಪಂ ಸರ್ವ ಸದಸ್ಯರು ವೇದಿಕೆಯಲ್ಲಿದ್ದರು. ಪಿ.ಡಿ.ಓ ಅಮೀರನಾಯಕ ಸ್ವಾಗತಿಸಿದರು. ಮುಖ್ಯೋಪಾಧ್ಯಾಯ ಕೆ.ಬಿ. ಕೊಣ್ಣೂರು ನಿರೂಪಿಸಿದರು.

# ಮಾಸಿಕ ಸಂತೆಗೆ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಪ್ರದೇಶಗಳ ಸಂಜೀವಿನಿ ಮಹಿಳಾ ಗುಂಪಿನ ಸದಸ್ಯರು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಉತ್ತೇಜನ ಕಲ್ಪಿಸುವ ಉದ್ದೇಶದಿಂದ ಈ ಮಾಸಿಕ ಸಂತೆಗೆ ಚಾಲನೆ ನೀಡಲಾಗಿದೆ ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಹೇಳಿದರು.

ಅವರು ತಾಲೂಕಿನ ಶಿಗ್ಲಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಗ್ರಾಮ ಪಂಚಾಯಿತಿ ಮತ್ತು ಗ್ರಾ.ಪಂ ಮಟ್ಟದ ಸಂಜೀವಿನಿ ಒಕ್ಕೂಟದ ಸಹಯೋಗದಲ್ಲಿ ತಾಲೂಕು ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಮಾಸಿಕ ಸಂತೆಯ ಆಯೋಜನೆ ಮೂಲಕ ಮಹಿಳಾ ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕ ಹಾಗೂ ಉತ್ಪಾದಕರಿಂದ ನೇರವಾಗಿ ಗ್ರಾಹಕರಿಗೆ ಉತ್ಪನ್ನಗಳನ್ನು ಪರಿಚಯಿಸುವುದರಿಂದ ಹೆಚ್ಚು ಹೆಚ್ಚು ಮಹಿಳೆಯರು ಸ್ವಾವಲಂಬಿಗಳಾಗಲು ಉಪಯುಕ್ತವಾಗಿದೆ ಎಂದು ತಿಳಿಸಿದರು. ಮುಖ್ಯ ಅಥಿತಿಗಳಾಗಿ ಪಾಲ್ಗೊಂಡಿದ್ದ ಗ್ರಾ.ಪಂ ಸದಸ್ಯ ಯಲ್ಲಪ್ಪ ತಳವಾರ ಮಾತನಾಡಿ, ಮಹಿಳಾ ಸ್ವಸಹಾಯ ಗುಂಪುಗಳು ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಮಾಡುವ ಮೂಲಕ ಆರ್ಥಿಕವಾಗಿ ಸಶಕ್ತರಾಗಲು ಸಹಕಾರಿಯಾಗಿದೆ ಎಂದರು.

ಗ್ರಾ.ಪಂ ಅಧ್ಯಕ್ಷೆ ಸಂಗೀತಾ ಪೂಜಾರ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಸದಸ್ಯ ಬಸಪ್ಪ ಕರ್ಜಗಿ, ಆಕಳಂಡಪ್ಪ ಕರ್ಜಕಣ್ಣವರ, ಶೈಲಾ ಹೂಗಾರ, ರೇಣುಕಾ ಆತಡಕರ, ಸಂತೋಷ ತಾಂದಳ, ಲಲಿತಾ ತವರಿ, ಜಯಶ್ರೀ ಕರ್ಜಗಿ, ಶಿವಪ್ಪ ಕುರಿ, ಗ್ರಾಮದ ಪ್ರಮುಖರಾದ ಮಂಜುನಾಥ ಮಹೇಂದ್ರಕರ, ಕುಮಾರಸ್ವಾಮಿ ವಿಕ್ತಕಮಠ, ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ರವಿ ಕೊರಕನವರ, ಸಂಜೀವಿನಿ ಯೋಜನೆ ಒಕ್ಕೂಟದ ಅಧ್ಯಕ್ಷೆ ನೇತ್ರಾವತಿ ಮಹೀಂದ್ರಕರ, ವಲಯ ಮೇಲ್ವಿಚಾರಕರಾದ ಬಸವರಾಜ ಗುತ್ತೆದಾರ, ಪಿ.ಎಂ. ಪಾಟೀಲ, ಸಂಜೀವಿನಿ ಯೋಜನೆ ಒಕ್ಕೂಟದ ಪದಾಧಿಕಾರಿಗಳು, ಸಿಬ್ಬಂದಿ ಮತ್ತು ಸ್ವ-ಸಹಾಯ ಗುಂಪಿನ ಸದಸ್ಯರು ಉಪಸ್ಥಿತರಿದ್ದರು.

ತಾಲೂಕಾ ಕಾರ್ಯಕ್ರಮ ವ್ಯವಸ್ಥಾಪಕ ಮಾರುತಿ ಕೊಡ್ಲಿ ಸ್ವಾಗತಿಸಿದರು. ವ್ಯವಸ್ಥಾಪಕ ವಿರೂಪಾಕ್ಷ ಕೊಣವರ ನಿರೂಪಿಸಿ ವಂದಿಸಿದರು.

### ‘ವಿಶ್ವ ತಂಬಾಕು ರಹಿತ ದಿನ’ ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿ ಡಾ.ಸುಭಾಸ ದಾಯಗೊಂಡ

# ತಂಬಾಕು ಸೇವನೆಯಿಂದ ಅನಾರೋಗ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಂಬಾಕು ಸೇವನೆಯಿಂದ ಮನುಷ್ಯನ ಆರೋಗ್ಯದ ಮೇಲೆ ಸಾಕಷ್ಟು ದುಷ್ಪರಿಣಾಮಗಳಾಗುತ್ತಿದ್ದು, ತಂಬಾಕಿನಿಂದ ವ್ಯಕ್ತಿಯಲ್ಲಿ ಮಾನಸಿಕ ಖಿನ್ನತೆ, ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು ಆವರಿಸಿಕೊಳ್ಳುತ್ತವೆ. ತಂಬಾಕಿನಿಂದ ಮಾಡಿದ ಉತ್ಪನ್ನಗಳಾದ ಗುಟ್ಕಾ, ಬೀಡಿ, ಸಿಗರೇಟು ಇತ್ಯಾದಿಗಳ ಚಟಕ್ಕೆ ಬಲಿಯಾಗುತ್ತಿರುವ ಯುವ ಜನಾಂಗ ಎಚ್ಚೆತ್ತು ಇವುಗಳಿಂದ ದೂರ ಇರಬೇಕೆಂದು ತಾಲೂಕು ವೈದ್ಯಾಧಿಕಾರಿ ಡಾ. ಸುಭಾಷ್ ದಾಯಗೊಂಡ ಹೇಳಿದರು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಕಚೇರಿ, ಜಿಲ್ಲಾ



> ಕಾರ್ಯಕ್ರಮ ಉದ್ಘಾಟಿಸಿದ ವಕೀಲ ಹಾಗೂ ಬಾಲ ನ್ಯಾಯ ಮಂಡಳಿ ಸದಸ್ಯ ಪಿ.ಎಂ. ವಾಲಿ ಮಾತನಾಡಿ, ತಂಬಾಕಿನಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಹಾಗೂ ತಂಬಾಕು ನಿಷೇಧ ಕಾಯ್ದೆ ಹಾಗೂ ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಮಾಹಿತಿಯನ್ನು ನೀಡಿದರು.

ಸಮೀಕ್ಷಾಧಿಕಾರಿಗಳ ಕಚೇರಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಐಇಸಿ ವಿಭಾಗ, ಜಿಲ್ಲಾ ತಂಬಾಕು ನಿಯಂತ್ರಣ ಅಧಿಕಾರಿಗಳ ಕಚೇರಿ, ತಾಲೂಕಾ ಆರೋಗ್ಯ ಅಧಿಕಾರಿ ಕಚೇರಿ ಶಿರಹಟ್ಟಿ ಹಾಗೂ ಸಮುದಾಯ ಆರೋಗ್ಯ ಕೇಂದ್ರ ಲಕ್ಷ್ಮೇಶ್ವರ ಇವರ ಸಂಯುಕ್ತ ಆಶ್ರಯದಲ್ಲಿ ಶನಿವಾರ ಹಮ್ಮಿಕೊಂಡಿದ್ದ ‘ವಿಶ್ವ ತಂಬಾಕು ರಹಿತ ದಿನ’ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಡಾ. ಪ್ರವೀಣ್‌ಕುಮಾರ್ ಸಜ್ಜನ್ ಮಾತನಾಡಿದರು. ಎಫ್.ಬಿ. ಹೂಗಾರ್ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರತಿ ವರ್ಷ ತಂಬಾಕು ಸೇವನೆಯಿಂದ ಭಾರತದಲ್ಲಿ 10 ಲಕ್ಷ ಜನ ಸಾವನ್ನಪ್ಪುತ್ತಾರೆ. ಪ್ರತಿ 8 ಸೆಕೆಂಡಿಗೆ ಒಬ್ಬರು ಮರಣ ಹೊಂದುತ್ತಾರೆ. ಕರ್ನಾಟಕದಲ್ಲಿ ಶೇ.28 ಜನರು ತಂಬಾಕು ಸೇವನೆಯನ್ನು ಮಾಡುತ್ತಾರೆ ಎಂದು ತಿಳಿಸಿದರಲ್ಲದೆ, ತಂಬಾಕು ಸೇವನೆ ಮುಂಜಾಗ್ರತೆ ಕುರಿತು ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಮಂಜುಳಾ ಹೂಗಾರ್, ಶಿರಹಟ್ಟಿ ಡಿಟಿಟಿ ಎಫ್.ಸಿ. ಹೊಸಮಠ, ಗಂಗಾಧರ್ ಬಣಗಾರ, ರೇಣುಕಾ ಡೋಂಬರ್, ಸುಧಾ ಪಪ್ಪಿ ಸೇರಿದಂತೆ ಸಾರ್ವಜನಿಕರು, ಆಶಾ ಕಾರ್ಯಕರ್ತರು, ಆರೋಗ್ಯ ಇಲಾಖೆ ಸಿಬ್ಬಂದಿಗಳು ಭಾಗವಹಿಸಿದ್ದರು.

# ಶಿವಾನುಭವ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಬಸವ ಕೇಂದ್ರ ಮತ್ತು ಜಾಗತಿಕ ಲಿಂಗಾಯತ ಮಹಾಸಭಾ ಸಂಯುಕ್ತ ಆಶ್ರಯದಲ್ಲಿ ಜೂನ್ 1ರಂದು ಸಾಯಂಕಾಲ 6.30 ಗಂಟೆಗೆ ಒಕ್ಕಲಗೇರಿಯ ಚಿಲ್ಲಾಳೇಶ್ವರ ಮಠದಲ್ಲಿ ಶಿವಾನುಭವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಪ್ರವಚನ ಪಿತಾಮಹ ಪೂಜ್ಯ ಲಿಂ. ಲಿಂಗಾನಂದ ಮಹಾಸ್ವಾಮಿಗಳ ಸ್ಮರಣೋತ್ಸವದ ಅಂಗವಾಗಿ ಉಪನ್ಯಾಸವನ್ನು ಬಸವಾನುಯಾಯಿಗಳಾದ ಪ್ರಕಾಶ ಅಸುಂಡಿ ನೀಡಲಿದ್ದಾರೆ. ಅಧ್ಯಕ್ಷತೆಯನ್ನು ಲೆಕ್ಕ ಪರಿಶೋಧಕ ಕೆ.ಎಸ್. ಚೆಟ್ಟಿ ವಹಿಸುವರು. ಸರ್ವಸದಸ್ಯರು ಹಾಗೂ ಆಸಕ್ತರು ಸಮಯಕ್ಕೆ ಸರಿಯಾಗಿ ಆಗಮಿಸಲು ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ ಹಾಗೂ ಸಂಚಾಲಕ ಕಿರಣ ತಿಪ್ಪಣ್ಣನವರ ವಿನಂತಿಸಿದ್ದಾರೆ.

# ಹಾಲು-ಹಣ್ಣು ವಿತರಣೆ ಇಂದು



■ ವಿಜಯಸಾಕ್ಷಿ ಸುದ್ದಿ, ರೋಣ

ಸಚಿವ ಸತೀಶ ಜಾರಕಿಹೊಳಿ ಜನ್ಮದಿನದ ನಿಮಿತ್ತ ರೋಣ ತಾಲೂಕಾ ಸತೀಶ ಜಾರಕಿಹೊಳಿ ಅಭಿಮಾನಿ ಬಳಗದಿಂದ ಜೂ 1ರಂದು ಬೆಳಿಗ್ಗೆ 11ಕ್ಕೆ ತಾಲೂಕಾ ಆಸ್ಪತ್ರೆಯ ಒಳ ರೋಗಿಗಳಿಗೆ ಹಾಲು, ಹಣ್ಣು, ಬ್ರೆಡ್ ವಿತರಿಸಲಾಗುತ್ತಿದೆ.

ಈ ಕಾರ್ಯಕ್ರಮಕ್ಕೆ ಅಭಿಮಾನಿ ಬಳಗದವರು ಹಾಗೂ ಎಸ್ಸಿ ವಿಭಾಗದ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ಪಕ್ಷದ ಅಭಿಮಾನಿಗಳು ಉಪಸ್ಥಿತರಿರಬೇಕು ಎಂದು ವಾಲ್ಮೀಕಿ ಸಮಾಜದ ತಾಲೂಕಾಧ್ಯಕ್ಷ ಬಸವರಾಜ ತಳವಾರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಯು.ಪಿ.ಎಸ್.ಸಿ ನಾಗರಿಕ ಸೇವೆ ಮತ್ತು ಬ್ಯಾಂಕಿಂಗ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಉಚಿತ ಪರೀಕ್ಷಾ ಪೂರ್ವ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜೂನ್ 15 ನಿಗದಿಪಡಿಸಿ, ಜಿಲ್ಲಾಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ರಮ ಕಟ್ಟಡ ತೆರವಿಗೆ ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಲಕ್ಷೇಶ್ವರ

ಪಟ್ಟಣದ ಭರಮದೇವರ ಸರ್ಕಲ್ ಹತ್ತಿರದ ಉರ್ದು ಶಾಲೆ ಪಕ್ಕದಲ್ಲಿರುವ ಪುರಸಭೆ ಆಸ್ತಿ ಸಂಖ್ಯೆ 21-1ಎ ನೇದ್ದರಲ್ಲಿ 6 ಮಳಿಗೆಗಳ ಕಟ್ಟಡವನ್ನು ಪುರಸಭೆಯಿಂದ ಯಾವುದೇ ಪರವಾನಿಗೆ ಇಲ್ಲದೇ ನಿರ್ಮಿಸಲಾಗಿದೆ. ಕೂಡಲೇ ಅದನ್ನು ತೆರವುಗೊಳಿಸಿ ಇದೇ ಜಾಗೆಯಲ್ಲಿ ಗ್ರಂಥಾಲಯ ಅಥವಾ ಅಂಗನವಾಡಿ ಸೇರಿ ಸಾರ್ವಜನಿಕರಿಗೆ ಅನುಕೂಲವಾಗುವುದಕ್ಕೆ ಬಳಕೆಯಾಗಬೇಕು. ಈ ಅನಧಿಕೃತ ಕಟ್ಟಡವನ್ನು 15 ದಿನಗಳೊಳಗಾಗಿ ತೆರವುಗೊಳಿಸದಿದ್ದರೆ ಲಕ್ಷ್ಮೇಶ್ವರ ಸಾರ್ವಜನಿಕರೆಲ್ಲರೂ ಸೇರಿ



ಹೋರಾಟ ಕೈಗೊಳ್ಳುತ್ತೇವೆ ಎಂದು ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ ಮುಖಾಂತರ ಜಿಲ್ಲಾಧಿಕಾರಿ, ಪೊಲೀಸ್ ವರಿಷ್ಠಾಧಿಕಾರಿ, ತಹಸೀಲ್ದಾರರಿಗೆ ಸಾರ್ವಜನಿಕರು ಮನವಿ ಸಲ್ಲಿಸಿದರು.

ಈ ವೇಳೆ ಮಂಜುನಾಥ ಮಾಗಡಿ, ಗುರಪ್ಪ ಮುಳಗುಂದ, ಶಂಕ್ರಪ್ಪ ಮುಳಗುಂದ, ಶಿವಪ್ಪ ಡಂಬಳ, ಭರಮಪ್ಪ ಮ್ಯಾಗೇರಿ ಚಂದ್ರಶೇಖರ ದಾನಿ, ಮುತ್ತು ಮುಳಗುಂದ ಮುಂತಾದವರಿದ್ದರು.

### ಅಹಿಲ್ಯಾಬಾಯಿ ಹೋಳ್ಕರ್ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಕಳಕಪ್ಪ ಜಿ.ಬಂಡಿ

# ಅಹಿಲ್ಯಾಬಾಯಿ ಲೋಕ ಕಲ್ಯಾಣದ ಪ್ರೇರಕ ಶಕ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

18ನೇ ಶತಮಾನದಲ್ಲಿ ಧಾರ್ಮಿಕ, ಶೈಕ್ಷಣಿಕ, ಸಾಂಸ್ಕೃತಿಕ ಮತ್ತು ಸಾಮಾಜಿಕ ಅಭಿವೃದ್ಧಿ ಕಾರ್ಯಗಳನ್ನ ಕೈಗೊಂಡ ಮರಾಠಾ ಸಾಮ್ರಾಜ್ಯದ ರಾಣಿ ಅಹಿಲ್ಯಾಬಾಯಿ ಹೋಳ್ಕರ್ ಅವರು ಲೋಕ ಕಲ್ಯಾಣದ ಪ್ರೇರಣಾ ಶಕ್ತಿಯಾಗಿದ್ದಾರೆ ಎಂದು ಮಾಜಿ ಸಚಿವ ಕಳಕಪ್ಪ ಜಿ.ಬಂಡಿ ಹೇಳಿದರು.

ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಶನಿವಾರ ನಡೆದ ಅಹಿಲ್ಯಾಬಾಯಿ ಹೋಳ್ಕರ್ ಅವರ 300ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ದೇವಾಲಯಗಳ ನಿರ್ಮಾಣ, ಧರ್ಮ ಛತ್ರಗಳು, ವಿಶ್ವವಿದ್ಯಾಲಯಗಳು, ಆಸ್ಪತ್ರೆಗಳು, ಮಹಿಳಾ ಸುಧಾರಣೆ ಮತ್ತು ದಾನ ದತ್ತಿಗಳ ಮೂಲಕ ಇಡೀ ಭಾರತದಾದ್ಯಂತ ಉತ್ತಮ ಆಡಳಿತ ಹಾಗೂ ಸಾಮಾಜಿಕ ನ್ಯಾಯದಾನದಲ್ಲಿ ಅವರು ಹೆಸರುವಾಸಿಯಾಗಿದ್ದರು. ರಾಣಿ ಅಹಿಲ್ಯಾಬಾಯಿ ಹೋಳ್ಕರ್ ಅವರ ಜನಪರ ನೀತಿ, ನಡೆ-ನುಡಿ, ಆಚಾರ-ವಿಚಾರಗಳನ್ನು ನಾವೆಲ್ಲರೂ ಅನುಸರಿಸೋಣ ಎಂದು ಹೇಳಿದರು.




> ಅಧ್ಯಕ್ಷತೆ ವಹಿಸಿದ್ದ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಕರುಣೆ, ಮಮತೆಗೆ ಹೆಸರಾದ ತಾಯಂದಿರು ಮನಸು ಮಾಡಿದರೆ ನಾಡನ್ನು ಆಳುತ್ತಾರೆ ಎಂಬುದಕ್ಕೆ ರಾಜಮಾತೆ ಅಹಿಲ್ಯಾಬಾಯಿ ನಿದರ್ಶನ. ಆಡಳಿತದಲ್ಲಿನ ಜಾಣ್ಮೆ, ಕೌಶಲ್ಯ, ಅಭಿವೃದ್ಧಿ ಕೆಲಸಗಳಲ್ಲಿನ ಶ್ರದ್ಧೆ, ಶ್ರಮ ಅವರನ್ನು 3 ದಶಕಗಳ ಕಾಲ ಸುಭದ್ರ ಆಳ್ವಿಕೆ ನೀಡುವಂತೆ ಮಾಡಿತು. ಇವತ್ತಿನ ಮಹಿಳೆಯರು ಕೂಡಾ ಎಂತಹ ಅಡೆತಡೆಗಳು ಬಂದರೂ ಅಂಜದೆ ಅಳುಕದೆ ಮುನ್ನುಗಬೇಕು. ಅಂದಾಗ ಯಶಸ್ಸು ನಿಮ್ಮನ್ನ ಹಿಂಬಾಲಿಸುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ರವಿ ದಂಡಿನ, ರಾಜೇಶ್ವರಿ ಸಾಲಗಟ್ಟಿ, ಜಿಲ್ಲಾ ಸಂಚಾಲಕ ಆರ್.ಕೆ. ಚವ್ಹಾಣ್, ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನಿರ್ಮಲಾ ಕೊಳ್ಳಿ ಮಾತನಾಡಿದರು.

ಈ ಸಂದರ್ಭದಲ್ಲಿ ಕಮಲಾಕ್ಷಿ ಗೊಂದಿ, ಕಸ್ತೂರಿ ಕಮ್ಮಾರ್, ಅಶ್ವಿನಿ ಜಗತಾಪ, ವಿಜಯಲಕ್ಷ್ಮೀ ಮಾನ್ವಿ, ಕವಿತಾ ಬಂಗಾರಿ, ಕಮಲಾಕ್ಷಿ ಅಂಗಡಿ, ಜ್ಯೋತಿ ಹಾನಗಲ್, ಅರುಣ ಪಾಟೀಲ, ನಂದಾ ಪಲ್ಲೇದ ಉಪಸ್ಥಿತರಿದ್ದರು. ಮಹಿಳಾ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಶ್ವಿನಿ ಅಂಕಲಕೋಟಿ ಕಾರ್ಯಕ್ರಮ ನಿರೂಪಿಸಿದರು, ಸ್ವಾತಿ ಅಕ್ಕಿ ವಂದಿಸಿದರು.

# ಪಟ್ಟೇದ ಅಂಚು ಸೀರೆಗಳು, ಬಟ್ಟೆಗಳಿಗೆ ಅಧಿಕೃತ ಬಳಕೆದಾರ ನೋಂದಣಿ ಸೌಲಭ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಪಟ್ಟೇದ ಅಂಚು ಸೀರೆಗಳು ಮತ್ತು ಬಟ್ಟೆಗಳಿಗೆ ಜಿಯಾಗ್ರಾಫಿಕಲ್ ಇಂಡಿಕೇಶನ್ ಅರ್ಜಿಯನ್ನು ಗಜೇಂದ್ರಗಡ ತಾಲೂಕಿನ ಮೂಲ ನೇಕಾರರನ್ನು ಜಿ.ಐನ ಕಾನೂನುಬದ್ಧ ಪಾಲಕರು ಮತ್ತು ಉತ್ಪಾದಕರು ಎಂದು ಔಪಚಾರಿಕವಾಗಿ ಗುರುತಿಸಲು ಮತ್ತು ನೋಂದಾಯಿಸಲು ಅಧಿಕೃತ ಬಳಕೆದಾರ ನೋಂದಣಿಯ ಸೌಲಭ್ಯವನ್ನು ಜೂನ್ 4ರಂದು ಮಧ್ಯಾಹ್ನ 12ರಿಂದ ಸಂಜೆ 6ರವರೆಗೆ ಗಜೇಂದ್ರಗಡ ನೇಕಾರರ ಸಹಕಾರಿ ಉತ್ಪಾದಕ ಸಂಘ ನಿಯಮಿತದ ಆವರಣದಲ್ಲಿ ಸಂಯೋಜಿಸಲಾಗುತ್ತಿದೆ.

**ನೋಂದಣಿಗೆ ಅಗತ್ಯವಿರುವ ದಾಖಲೆಗಳು:** ಶಾಶ್ವತ ವಸತಿ ವಿಳಾಸ ಪುರಾವೆ (ಆಧಾರ್ ಕಾರ್ಡ್ ಅಥವಾ ಮತದಾರರ ಗುರುತಿನ ಚೀಟಿ) ಇಲಾಖೆಯಿಂದ ನೀಡಿದ ಕೈಮಗ್ಗ ನೇಕಾರ ಗುರುತಿನ ಚೀಟಿ ಪೆಹೆಚಾನ್ ಕಾರ್ಡ್, ಅರ್ಜಿದಾರರ 2 ಪಾಸ್‌ಪೋರ್ಟ್ ಸೈಜ್ ಭಾವಚಿತ್ರಗಳೊಂದಿಗೆ ನೇಕಾರರು ಖುದ್ದಾಗಿ ಹಾಜರಿರಬೇಕು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಕೊಠಡಿ ಸಂಖ್ಯೆ-206, 2ನೇ ಮಹಡಿ, ಜಿಲ್ಲಾ ಪಂಚಾಯತ್ ಗದಗ, ದೂ ಸಂ-9916582238 ಹಾಗೂ ಅಧ್ಯಕ್ಷರು/ಕಾರ್ಯದರ್ಶಿಗಳು, ಗಜೇಂದ್ರಗಡ ನೇಕಾರರ ಉತ್ಪಾದಕ ಸಂಘ ನಿ. ಗಜೇಂದ್ರಗಡ, ದೂ ಸಂ-9916119489 ಇವರನ್ನು ಸಂಪರ್ಕಿಸಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka